# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 Volume - 01 | ಸಂಚಿಕೆ – 243 Issue - 243 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 Title- Code: KARKAN 28269 | ಚಿತ್ರದುರ್ಗ Chitradurga | ದಿನಾಂಕ: 16–04–2024 ಮಂಗಳವಾರ Date: 16-04-2024 Tuesday | ಪುಟ: 4 Page: 4 | ಬೆಲೆ : ರೂ.2–00 Price: Rs. 2-00



ಒಳಪುಟದ ಸುದ್ದಿಗಳು

ಏಪ್ರಿಲ್ 18 ಹಾಗೂ 19 ರಂದು ಸಿಇಟಿ, 14 ಕೇಂದ್ರಗಳಲ್ಲಿ ಪರೀಕ್ಷೆ 2

ಸಂವಿಧಾನದಿಂದ ವಿಶ್ವದಲ್ಲಿಯೇ ದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತ 3

ಗೋವಿಂದ ಕಾರಜೋಳರವರಿಗೆ ಟಾಂಗ್ ಕೊಟ್ಟ ಚಂದ್ರಪ್ಪ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಶಾಸಕ ವೀರೇಂದ್ರ ಮತ ಓಟಕ್ಕೆ ಬ್ರೇಕ್ ಹಾಕ್ತಾರಾ ಮಾಜಿ ಶಾಸಕ ತಿಪ್ಪಾರೆಡ್ಡಿ?

» ನಮ್ಮ ಜನ ಸಮಚಾರ

ಚಿತ್ರದುರ್ಗ: ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ ಜಿಲ್ಲಾ ಕೇಂದ್ರ ವ್ಯಾಪ್ತಿಯಲ್ಲಿರುವ ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಲೋಕಸಭೆ ಎಫೆಕ್ಟ್ ಜೋರಾಗಿ ಕಾಣುತ್ತಿದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆ ಎಂಬ ಖ್ಯಾತಿ ಪಡೆದಿತ್ತು.ಆದರೆ 2009 ರಲ್ಲಿ ಬಿಜೆಪಿ 2013 ರಲ್ಲಿ ಕಾಂಗ್ರೆಸ್ ಮತ್ತೆ 2019 ರ ಚುನಾವಣೆಯಲ್ಲಿ ಬಿಜೆಪಿ ಬಾವುಟ ಹಾರಿಸುವ ಮೂಲಕ ಹಾವು ಏಣಿ ಆಟ ಮುಂದುವರೆದಿದ್ದು ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದ ಮತದಾರರ ಈ ಬಾರಿ ಯಾರ ಪರ ಒಲವು ತೋರಲಿದ್ದಾರೆ ಎಂಬುದು ಈ ಬಾರಿ ಚುನಾವಣೆ ನಂತರ ಕ್ಲಿಯರ್ ಪಿಕ್ಚರ್ ತಿಳಿಯಲಿದೆ.

ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರ ಒಂದು ರೀತಿಯಲ್ಲಿ ವಿಶೇಷ ಮತ್ತು ಹಲವು ಜಾತಿ ಲೆಕ್ಕಚಾರಗಳನ್ನು ತಲೆಕೆಳಗಾಗಿ ಮಾಡುವ ಮೂಲಕ ಅಚ್ಚರಿ ಫಲಿತಾಂಶ ನೀಡಿದ ಕ್ಷೇತ್ರ ಎಂಬ ಹೆಗ್ಗಳಿಕೆ ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರಕ್ಕೆ ಸಲ್ಲುತ್ತದೆ. ಇಲ್ಲಿ ಪಕ್ಷಕ್ಕಿಂತ ವ್ಯಕ್ತಿಗತ ರಾಜಕಾರಣಕ್ಕೆ ಮತದಾರರು ಮಣೆ ಹಾಕಿದ್ದಾರೆ. ಜಿಲ್ಲಾ ಕೇಂದ್ರದ ಸುತ್ತಲೂ ಹಳ್ಳಿಗಳನ್ನು ಒಳಗೊಂಡಿರುವ ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಅಹಿಂದ ಮತಗಳೇ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದವು.

**ವ್ಯಕ್ತಿಗರ ರಾಜಕಾರಣಕ್ಕೆ ಮಣೆ ಹಾಕುತ್ತಿರುವ ಮತದಾರ:** ಜಿಲ್ಲಾ ಕೇಂದ್ರವಾಗಿರುವ ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಕ್ಷೇತ್ರದಲ್ಲಿ ಜಾತಿ ಲೆಕ್ಕಚಾತ ವರ್ಕೌಟ್ ಆಗಿದ್ದು ತುಂಬಾ ವಿರಳ ಎಂದರೆ ತಪ್ಪಾಗಲಾರದು. ಅಹಿಂದ ಮತದಾರರು,ಲಿಂಗಾಯತ ಮತಗಳು ಇಬ್ಬರೂನಿರ್ಣಾಯಕಸಂಖ್ಯೆಯಲ್ಲಿರುವ ಕ್ಷೇತ್ರವಾಗಿದೆ. ಜೆಡಿಎಸ್ ಮತ್ತು ಕಾಂಗ್ರೆಸ್ ಎರಡು ಪಕ್ಷಗಳ ನಡುವೆ ಸದಾ ಫೈಟ್ ಇತ್ತಾದರೂ ಸಹ ಅದು ವ್ಯಕ್ತಿ ರಾಜಕಾರಣದ ಮೇಲೆ ಎನ್ನಬಹುದು. 2003 ರ ಚುನಾವಣೆಯಿಂದ ತಿಪ್ಪಾರೆಡ್ಡಿ ಫ್ಯಾಮಿಲಿ ಮತ್ತು ಎಸ್.ಕೆ.ಬಸವರಾಜನ್ ಫ್ಯಾಮಿಲಿ ಫೈಟ್ ಆರಂಭವಾಗಿ ಪ್ರತಿ ಚುನಾವಣೆಯಲ್ಲಿ ಎರಡು ಕುಟುಂಬಗಳನ್ನು ಜಿದ್ದಾಜಿದ್ದು ಚುನಾವಣೆ ನಡೆಯುತ್ತಿತ್ತು ಆದರೆ 2008 ರಲ್ಲಿ ಬಸವರಾಜನ್ ತಿಪ್ಪಾರೆಡ್ಡಿ ವಿರುದ್ದ ಗೆದ್ದು ಜೆಡಿಎಸ್ ಗೆ ಶಕ್ತಿ ತುಂಬಿದ್ದರು. ಆದರೆ ನಂತರ ಚುನಾವಣೆಯಲ್ಲಿ ಬಸವರಾಜನ್ ಸೋಲು ಅನುಭವಿಸಿದ್ದು ಇತಿಹಾಸವಾಗಿದೆ.

**ರಾಜಕೀಯ ಸಂಪ್ರದಾಯಿಕ ಎದುರಾಳಿಗಳ ಸಮಾಗಮಕ್ಕೆ ಸಾಕ್ಷಿಯಾದ ಲೋಕಸಭೆ ಮೈತ್ರಿ:** ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಬಿಜೆಪಿ– ಜೆಡಿಎಸ್ಮೂಲಕ ಯಿಂದ ರಾಜಕೀಯ ಲೆಕ್ಕಚಾರ ಉಲ್ಟಾ ಆಗಿದೆ. ಸದಾ ಒಬ್ಬರಿಗೊಬ್ಬರು ಆರೋಪ ಪ್ರತ್ಯಾರೋಪದಲ್ಲಿ ರಾಜಕೀಯ ಎದುರಾಳಿಗಾಳಾಗಿದ್ದ ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ಎಸ್.ಕೆ.ಬಸವರಾಜನ್, ಸೌಭಾಗ್ಯ ಬಸವರಾಜನ್, ಮಾಜಿ ನಗರಸಭೆ ಅಧ್ಯಕ್ಷ ಬಿ.ಕಾಂತರಾಜ್ ಒಂದೇ ವೇದಿಕೆಯಲ್ಲಿ ನಿಂತು ಮೈತ್ರಿ ಅಭ್ಯರ್ಥಿ ಪರ ನಿಂತು ಕೆಲಸ ಮಾಡುತ್ತಿದ್ದು ಬಿಜೆಪಿ ಬಲವನ್ನು ಹೆಚ್ಚಿಸಿದ್ದು ಮತಗಳಾಗಿ ಪರಿವರ್ತನೆಯಾಗುತ್ತದೆ ಎಂಬುದು ಕಾದು ನೋಡಬೇಕಿದೆ. ಇವೆಲ್ಲದರ ಜೊತೆಗೆ ಹಾಲಿ ಎಂಎಲ್ಸಿ ಕೆ.ಎಸ್.ನವೀನ್ ಸಹ ಇದ್ದು ಒಂದಿಷ್ಟು ಸಮುದಾಯದ ಮತಗಳು ತರಬಹುದು ಎಂಬ ನಿರೀಕ್ಷೆಯಲಿ ಬಿಜೆಪಿ ಇದ್ದು ಮೈತ್ರಿನಾಯಕರು ಯಾವ ರೀತಿ ಮತಗಳನ್ನು ವರ್ಕೌಟ್ ಮಾಡುತ್ತಾರೆ ಎಂಬುದು ಚುನಾವಣೆ ನಂತರ ತಿಳಿಯಲಿದೆ.

**ಕಾಲಿಗೆ ಚಕ್ರ ಕಟ್ಟಿ ಪ್ರಚಾರ ನಡೆಸುತ್ತಿರವ ಜಿ.ಹೆಚ್.ತಿಪ್ಪಾರೆಡ್ಡಿ ಲೀಡ್ ತಂತ್ರಗಾರಿಕೆ ವರ್ಕೌಟ್ ಆಗುತ್ತಾ:** ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ರಾಜಕೀಯ ಲೆಕ್ಕಚಾರದಲ್ಲಿ ತಪ್ಪಿದ್ದು ತುಂಬಾ ವಿರಳ, ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ತನ್ನ ವೈಯಕ್ತಿಕ ಹಿಡಿತವನ್ನು ಮುಂದುವರೆಸಿದ್ದಾರೆ. ವಿಧಾನ ಸಭಾ ಚುನಾವಣೆಯಲ್ಲಿ ಸೋಲು ಅನುಭವಿಸಿದರು ಜನರ ಒಡನಾಟವನ್ನು ಬಿಟ್ಟಿಲ್ಲ. ಹಳ್ಳಿ ಕೇರಿಗಳ ಮನೆ ಮನೆ ತಲುಪಿರುವ ತಿಪ್ಪಾರೆಡ್ಡಿ ಅವರು ಕಳೆದ ಲೋಕಸಭೆ ಚುನಾವಣೆಯಲ್ಲಿ ಶಾಸಕರಾಗಿದ್ದ ಸಂದರ್ಭದಲ್ಲಿ 37 ಸಾವಿರಕ್ಕೂ ಹೆಚ್ಚು ಲೀಡ್ ಬಿಜೆಪಿಗೆ ದೊರಕಿತ್ತು.ಆದರೆ ಈಬಾರಿ ಕಾಂಗ್ರೆಸ್ ಶಾಸಕರಿದ್ದು ತಿಪ್ಪಾರೆಡ್ಡಿ ಅವರ ಅನುಭವ ಮತ್ತು ರಾಜಕೀಯ ಲೆಕ್ಕಚಾರ ಯಾವ ರೀತಿ ಮತಗಳಾಗಿ ಪರಿಣಾಮ ಬೀರುತ್ತದೆ. ಮೈತ್ರಿ ನಾಯಕರನ್ನು ಜೊತೆಗಿಟ್ಟುಕೊಂಡು ಯಾವ ರೀತಿ ಮತ್ತಷ್ಟು ಬಲ ಹೆಚ್ಚಿಸಿಕೊಳ್ಳುತ್ತಾರೆಯೇ.


ಗೋವಿಂದಪ್ಪ ಕಾರಜೋಳ ಅವರನ್ನು ಕರೆ ತಂದಿದ್ದು ತಿಪ್ಪಾರೆಡ್ಡಿ ಎಂಬ ಮಾತು ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿದ್ದು ತಿಪ್ಪಾರೆಡ್ಡಿ ತಂತ್ರಗಳು ವರ್ಕೌಟ್ ಆದರೆ ಬಿಜೆಪಿ ಲೀಡ್ ಕಾಯಂ ಎಂಬ ಮಾತು ಕೇಳಿ ಬರುತ್ತಿದೆ.

**ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರಿಗೆ ಅಗ್ನಿ ಪರೀಕ್ಷೆಯಾದ ಲೋಕಸಭಾ ಚುನಾವಣೆ:** ಜಿಲ್ಲಾ ಕೇಂದ್ರ ಚಿತ್ರದುರ್ಗ ಕ್ಷೇತ್ರದಲ್ಲಿ ದಶಕಗಳ ನಂತರ ಅಧಿಕಾರದಿಂದ ವಂಚಿತವಾಗಿದ್ದ ಅಧಿಕಾರ ದೊರಕಿದೆ. 2023ವಿಧಾನಸಭಾಕ್ಷೇತ್ರದಲ್ಲಿ ವೀರೇಂದ್ರ ಪಪ್ಪಿ ಗೆಲುವು ಸಾಧಿಸುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದ್ದಾರೆ. ವೀರೇಂದ್ರ ಪಪ್ಪಿ ಶಾಸಕರಾದ ನಂತರ ನಡೆಯುತ್ತಿರುವ ಮೊದಲ ಚುನಾವಣೆ ಲೋಕಸಭೆ ಚುನಾವಣೆ ಆಗಿದ್ದು ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಲೀಡ್ ತಂದು ಕೊಡುವ ಮೂಲಕ ನನ್ನ ಶಕ್ತಿ ಇನ್ನು ಕಡಿಮೆ ಆಗಿಲ್ಲ ಎಂದು ಮತ್ತೆ ಸಾಬೀತುಪಡಿಸುತ್ತಾರಾ? ಏಕೆಂದರೆ ಇಲ್ಲಿಯವರೆಗೆ ತನ್ನ ಕ್ಷೇತ್ರದಲ್ಲಿ ಸಿಎಂ ಸಭೆ ನಂತರ ಒಂದೆರಡು ಸಭೆ ನಡೆಸುತ್ತಿರುವುದು ಬಿಟ್ಟರೆ ಯಾವ ಹಳ್ಳಿಗೆ ತೆರಳಿ ಪ್ರಚಾರ ನಡೆಸುತ್ತಿಲ್ಲ. ಆದರೆ ಎರಡ್ಮೂರು ದಿನದಲ್ಲಿ ಪ್ರತಿ ಹಳ್ಳಿಗೆ ತೆರಳಿ ಪ್ರಚಾರ ಆರಂಭಿಸುವ ನಿರೀಕ್ಷೆ ಕಾಂಗ್ರೆಸ್ ಪಕ್ಷಕ್ಕೆ ಇದ್ದು ಗ್ಯಾರಂಟಿ ಯೋಜನೆಯ ಮತಗಳು ಮತ್ತು ಲಿಂಗಾಯತ ಮತಗಳನ್ನು ಕಾಂಗ್ರೆಸ್ ಪಕ್ಷಕ್ಕೆ ತಂದುಕೊಟ್ಟರೆ ಶಾಸಕ ವೀರೇಂದ್ರ ಪಪ್ಪಿ ಲೋಕ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದಂತೆ ಆಗುತ್ತದೆ ಚಂದ್ರಪ್ಪ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಸಿದಂತೆ ಆಗುತ್ತದೆ.ಅಗ್ನಿ ಪರೀಕ್ಷೆಯಲ್ಲಿ ಗೆದ್ದು ಬೀಗುತ್ತಾರಾ ಪಪ್ಪಿ?

ಕಾಂಗ್ರೆಸ್ ಮತ್ತು ಎನ್ ಡಿಎ ಎರಡು ಪಕ್ಷಗಳ ಮುಖಂಡರು , ಕಾರ್ಯಕರ್ತರು ರಣತಂತ್ರಗಳನ್ನು ಹೆಣೆಯುವ ಮೂಲಕ ನಮ್ಮದೇ ಗೆಲುವು ಎಂದು ಅಖಾಡ ಪ್ರವೇಶಿದ್ದಾರೆ. ವಿಧಾನ ಸಭಾ ಚುನಾವಣೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಸಾಕಷ್ಟು ವ್ಯತ್ಯಾಸ ಮತ್ತು ಜಾತಿ ಲೆಕ್ಕಚಾರ ಬದಲಾಗುತ್ತದೆ. ಯಾವ ರೀತಿ ಚುನಾವಣೆಯಲ್ಲಿ ಎರಡು ಪಕ್ಷಗಳ ನಾಯಕರು ಹೆಣೆಯುತ್ತಾರೆ ಎಂಬುದನ್ನು ಫಲಿತಾಂಶವರೆಗೂ ಕಾಯಬೇಕಿದ್ದು ಚಿತ್ರದುರ್ಗದ ಲೀಡ್ ಎರಡು ಪಕ್ಷದ ಅಭ್ಯರ್ಥಿಗಳ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂಬುದರಲ್ಲಿ ಎರಡು ಮಾತಿಲ್ಲ..

ನಮ್ಮ ಜನ ವಿಶೇಷ




2023

## ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಇತಿಹಾಸ

ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಜಿ ಎಚ್ ತಿಪ್ಪಾರೆಡ್ಡಿ ಸತತ 30 ವರ್ಷಗಳಿಂದ ಒಂದಿಲ್ಲೊಂದು ರೀತಿ ಅಧಿಕಾರದಲ್ಲಿ ಇದ್ದಾರೆ. 1994ರಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಜನತಾ ದಳದ ಏಕಾಂತಯ್ಯನವರನ್ನು ಸೋಲಿಸುವ ಮೂಲಕ ತಿಪ್ಪಾರೆಡ್ಡಿ ಶಾಸಕರಾಗಿ ನಂತರ 2008ರಲ್ಲಿ ಮಾತ್ರ ಸೋಲು ಕಂಡ ತಿಪ್ಪಾರೆಡ್ಡಿ ಅವರು 2023 ಚುನಾವಣೆವರೆಗೆ ಶಾಸಕರಾಗಿದ್ದರು ಆದರೆ 2023 ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ಪಡೆದು ಕೆ.ಸಿ.ವೀರೇಂದ್ರ ಪಪ್ಪಿ ದೈತ್ಯ ರಾಜಕಾರಣಿ ತಿಪ್ಪಾರೆಡ್ಡಿ ಅವರನ್ನು 53 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ತಿಪ್ಪಾರೆಡ್ಡಿ ಅವರನ್ನು ಸೋಲಿಸಿದರು.

## ಕಾಂಗ್ರೆಸ್–ಬಿಜೆಪಿಗೆ ಪ್ಲಸ್, ಮೈನಸ್

- ಸ್ಥಳೀಯ ನಾಯಕರ ಒಗ್ಗಟ್ಟು, ಮೇಲ್ಜಾತಿ ಮತಗಳು, ಜೆಡಿಎಸ್ ಮತಗಳು ಬಿಜೆಪಿಗೆ (+)
- ಮೊದಲ ಬಾರಿ ಕಾಂಗ್ರೆಸ್ ಸ್ಥಳೀಯ ಶಾಸಕರು,ಗ್ಯಾರಂಟಿಗಳು ಯೋಜನೆಗಳು, ಅಹಿಂದ- ಅಲ್ಪ ಸಂಖ್ಯಾತ ಮತಗಳು ಕಾಂಗ್ರೆಸ್‌ಗೆ (+)
- ಕಾಂಗ್ರೆಸ್ ಶಾಸಕ ಕೆ.ಸಿ.ವೀರೇಂದ್ರ ಅವರು ಇನ್ನು ಚುನಾವಣೆ ಕೆಲಸ ಪೂರ್ಣ ಆರಂಭಿಸದಿರುವುದು (-)
- ಸ್ಥಳೀಯ ಬಿಜೆಪಿ ಶಾಸಕ ಇಲ್ಲದಿರುವುದು (-)
- ಬಿಜೆಪಿ ಮೈತ್ರಿಯಲ್ಲಿ ಒಗ್ಗಟ್ಟಿನ ಕೊರತೆ, ಎಲ್ಲೂ ಫೀಲ್ಡ್ ಗೆ ಇಳಿಯದಿರುವುದು (-)

## ಮತದಾರರ ವಿವರ

| | | | |
|---|---|---|---|
| 1,29,809 ಪುರುಷರು | 1,34,398 ಮಹಿಳೆಯರು | 41 ತೃತಿಯಲಿಂಗ | 2,64,248 ಒಟ್ಟು ಮತದಾರರು |




2024

## ವಿಧಾನಸಭಾ ಚುನಾವಣೆಯಲ್ಲಿ ಮತಗಳ ಅಂತರ

| ಪಕ್ಷ | 2018 | 2023 |
|---|---|---|
| ಬಿಜೆಪಿ | 82,896 | 67437 |
| ಕಾಂಗ್ರೆಸ್ | 49,014 | 120849 |
| ಜೆಡಿಎಸ್ | 49911 | - |
| ಅಂತರ | 32985 | 53412 |

## ಫಾಸ್ಟ್ ನ್ಯೂಸ್

### ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಪದವಿ ಪೂರ್ವ ಕಾಲೇಜ್‌ಗೆ ಶೇ. 100 ರಷ್ಟು ಫಲಿತಾಂಶ

» ಚಿತ್ರದುರ್ಗ

ಕುಂಚಿಗನಾಳು ಗ್ರಾಮದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜ್‌ಗೆ 2023–24 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಶೇ. 100 ರಷ್ಟು ಫಲಿತಾಂಶ ಲಭಿಸಿದೆ. ವಸತಿ ಶಾಲೆಯ 16 ವಿದ್ಯಾರ್ಥಿಗಳು ಅತ್ಯುನ್ನತ ದರ್ಜೆಯಲ್ಲಿ, 46 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 2 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಉತ್ತಮ ಸಾಧನೆ ತೋರಿದ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಹಾಗೂ ಅಲ್ಪಸಂಖ್ಯಾತ ಇಲಾಖೆಯ ಅಧಿಕಾರಿಗಳು ಅಭಿನಂಧನೆ ಸಲ್ಲಿಸಿದ್ದಾರೆ. ವಸತಿ ಶಾಲೆಯ 2024–25 ನೇ ಸಾಲಿಗೆ ಪ್ರಥಮ ಪಿಯುಸಿ ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಿಗೆ ಪ್ರವೇಶಾತಿ ಪ್ರಾರಂಭವಾಗಿವೆ. ಶೇ.75 ರಷ್ಟು ಅಲ್ಪಸಂಖ್ಯಾತರಿಗೆ, ಶೇ.25 ರಷ್ಟು ಹಿಂದುಳಿದ ವರ್ಗಗಳಿಗೆ ಸ್ಥಾನಗಳು ಮೀಸಲಾಗಿವೆ. ಇದರ ಜೊತೆಗೆ ಸಿಇಟಿ,ನೀಟ್,ಜೆಇಇ ಮತ್ತು ಸಿಎ,ಸಿಎಲ್ಎಟಿ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ. ದಾಖಲಿಸಲು ಇಚ್ಛಿಸುವವರು ವಸತಿ ಪ್ರಾಂಶುಪಾಲರನ್ನು ಸಂಪರ್ಕಿಸಬಹುದು.

### ಎಸ್.ಎಸ್.ಎಲ್.ಸಿ ಪರೀಕ್ಷೆ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಕಳೆದ ವಾರ ಮುಕ್ತಾಯಗೊಂಡ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಏಪ್ರಿಲ್ 15 ರಿಂದ ನಗರದ ವಿವಿಧ ಪ್ರೌಢಶಾಲೆಗಳಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೌಲ್ಯಮಾಪನ ಜರುಗುವ ಪ್ರೌಢಶಾಲೆಗಳ ಸುತ್ತ ನಿಷೇಧಾಜ್ಞೆ ಜಾರಿ ಮಾಡಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ನಗರದ ವಾಸವಿ ಪ್ರೌಢಶಾಲೆಯಲ್ಲಿ ಕನ್ನಡ, ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಇಂಗ್ಲಿಷ್, ಸಂತ ಜೋಸೆಫ್ ಬಾಲಕಿಯರ ಪ್ರೌಢ ಶಾಲೆಯಲ್ಲಿ ಹಿಂದಿ, ಚಿನ್ಮೂಲಾದ್ರಿ ರಾಷ್ಟ್ರೀಯ ಪ್ರೌಢಶಾಲೆಯಲ್ಲಿ ಗಣಿತ, ವಿದ್ಯಾ ವಿಕಾಸ ಪ್ರೌಢಶಾಲೆಯಲ್ಲಿ ವಿಜ್ಞಾನ ಹಾಗೂ ಡಾನ್ ಬಾಸ್ಕೋ ಪ್ರೌಢ ಶಾಲೆಯಲ್ಲಿ ಸಮಾಜ ವಿಜ್ಞಾನ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ನಡೆಯಲಿದೆ. ಈ ಶಾಲೆಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಜಿಲ್ಲಾಧಿಕಾರಿ ಟಿ ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಏಪ್ರಿಲ್ 15ರಿಂದ ಮೌಲ್ಯಮಾಪನ ನಿಷೇಧಾಜ್ಞೆ ಮುಗಿಯುವವರೆಗೂ ಜಾರಿಯಲ್ಲಿರುತ್ತದೆ.

### 9 ನಾಮಪತ್ರ ಸಲ್ಲಿಕೆ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಸಾರ್ವತ್ರಿಕ ಚುನಾವಣೆ ನಡೆಯುತ್ತಿದ್ದು ನಾಮಪತ್ರ ಸಲ್ಲಿಕೆಯ ಎರಡನೇ ದಿನವಾದ ಏಪ್ರಿಲ್ 15 ರಂದು 8 ಅಭ್ಯರ್ಥಿಗಳಿಂದ 9 ನಾಮಪತ್ರಗಳು ಸಲ್ಲಿಕೆಯಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಕಾಂಗ್ರೆಸ್ ಪಕ್ಷದಿಂದ ಡಾ. ಪ್ರಭಾ ಮಲ್ಲಿಕಾರ್ಜುನ್ ಎರಡು ನಾಮಪತ್ರ ಸಲ್ಲಿಸಿದ್ದಾರೆ. ಬಿಜೆಪಿ ಯಿಂದ ಜಿ.ಎಸ್.ಗಾಯಿತ್ರಿ, ಬಿಎಸ್ ಪಿಯಿಂದ ಹನುಮಂತಪ್ಪ, ಸಮಾಜ ವಿಕಾಸ ಕ್ರಾಂತಿ ಪಕ್ಷದಿಂದ ಕೆ.ಹೆಚ್.ರುದ್ರೇಶ್, ಪಕ್ಷೇತರರಾಗಿ ಸುಭಾನ್ ಖಾನ್, ಟಿ.ಜಬೀನ್ ತಾಜ್, ಸಿ.ಎಂ.ಮಂಜುನಾಥಸ್ವಾಮಿ, ಕೆ.ಜಿ.ಅಜ್ಜಪ್ಪ ಇವರು ನಾಮಪತ್ರ ಸಲ್ಲಿಸಿದ್ದಾರೆ. ಏ.12 ರಂದು 5 ಅಭ್ಯರ್ಥಿಗಳಿಂದ 6 ನಾಮಪತ್ರಗಳು ಸಲ್ಲಿಕೆಯಾಗಿದ್ದವು.

## ಬಿಜೆಪಿ ಅಭ್ಯರ್ಥಿ ಕಾರಜೋಳ ಅವರಿಂದ ವಿ.ಪಿ. ಬಡಾವಣೆಯಲ್ಲಿ ಮತಯಾಚನೆ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರು ನಗರದ ವಿ.ಪಿ.ಬಡಾವಣೆಯಲ್ಲಿ ಸೋಮವಾರ ಮತಯಾಚಿಸಿದರು.

ಮನೆ ಮನೆಗೆ ತೆರಳಿ ಮತಯಾಚಿಸಿದ ಗೋವಿಂದ ಕಾರಜೋಳರವರು ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಬೇಕಾಗಿರುವುದ'ರಿಂದ ಈ ಬಾರಿಯ ಚುನಾವಣೆ ಅತ್ಯಂತ ಮಹತ್ವದ್ದಾಗಿದ್ದು, ಬಹುಮತಗಳಿಂದ ಗೆಲ್ಲಿಸಿ ನನ್ನನ್ನು ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಜನತೆಯಲ್ಲಿ ಮನವಿ ಮಾಡಿದರು. ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ನಗರಾಧ್ಯಕ್ಷ ನವೀನ್ ಚಾಲುಕ್ಯ, ನಗರಸಭಾ ಸದಸ್ಯರಾದ ಸುರೇಶ್, ಹರೀಶ್, ಶ್ವೇತಾ ವೀರೇಶ್, ಜಿ.ಎನ್.ಮಲ್ಲಿಕಾರ್ಜುನ್, ಸಂತೋಷ್, ಹೆಗ್ಗನಗೌಡ, ಮುರುಗೇಶ್‌ಗೌಡ, ಸುರೇಶ್, ಬಾಬು, ಶೀಲ, ವೀಣ, ಮಂಜುಳಮ್ಮ, ಲೀಲಾ ಇನ್ನು ಅನೇಕರು ಮತಯಾಚನೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ವಿಕಲಚೇತನರಿಗೆ ನಾಲ್ಕು, ಮಹಿಳೆಯರಿಗಾಗಿ ಪಿಂಕ್ ಭೂತ್, ಯುವಕರಿಗಾಗಿ ಯುವ ಮತಗಟ್ಟೆ ಸ್ಥಾಪನೆ : ಜೀವನ್‌ಕಟ್ಟಿಮನಿ.



» **ಚಳ್ಳಕೆರೆ**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚಳ್ಳಕೆರೆ ವಿಧಾನಸಭಾ ವ್ಯಾಪ್ತಿಯಲ್ಲಿ ವಿಕಲಚೇತನ, ಯುವ ಮತದಾನ ಕೇಂದ್ರ ಹಾಗೂ ಸಖಿ ಭೂತ್‌ಗಳನ್ನು ಕ್ಷೇತ್ರದವಿವಿಧೆಡೆ ಸಿದ್ದಪಡಿಸಲಾಗಿದ್ದು,ಮೂಲಭೂತ ಸೌಕರ್ಯವೂ ಸೇರಿದಂತೆ ಎಲ್ಲಾ ವ್ಯವಸ್ಥೆಯನ್ನು ಮಾಡಲಾಗುತ್ತಿದೆ ಎಂದು ಸ್ವೀಪ್ ಸಮಿತಿ ಕಾರ್ಯದರ್ಶಿ ಜೀವನ್‌ಕಟ್ಟಿಮನಿ ತಿಳಿಸಿದರು. ಅವರು, ನಗರದ ವಿಕಲಚೇತನ ಹಾಗೂ ಪಿಂಕ್ ಭೂತ್‌ಗಳಿಗೆ ಭೇಟಿ ನೀಡಿ ಮತಗಟ್ಟೆಗಳ ಸಿದ್ದತೆಗಳ ಬಗ್ಗೆ ಮಾಹಿತಿ ನೀಡಿದರು. ಈ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟುನಾಲ್ಕುವಿಕಲಚೇತನ,ಎರಡು ಪಿಂಕ್ ಮತಗಟ್ಟೆ, ಒಂದು ಯುವ ಮತದಾರರ ಮತಗಟ್ಟೆತಯನ್ನು ಸಿದ್ದಪಡಿಸಲಾಗಿದೆ. ನಗರದ ಚಿತ್ರದುರ್ಗ ರಸ್ತೆಯಲ್ಲಿ ಬಿಇಒ ಕಚೇರಿ ಆವರಣದಲ್ಲಿರುವ ಸರ್ಕಾರಿ ಉರ್ದು ಶಾಲೆಯಲ್ಲಿ ವಿಕಲಚೇತನ ಹಾಗೂ ಪಿಂಕ್ ಭೂತ್ ಸ್ಥಾಪಿಸಿದೆ, ಕಾಟಪ್ಪನಹಟ್ಟಿಯ ಸರ್ಕಾರಿ ಪ್ರಾಥಮಿಕ ಶಾಲೆ, ವಿಶ್ವಭಾರತಿ ಪ್ರೌಢಶಾಲೆಯಲ್ಲಿ ವಿಕಲಚೇತನ ಭೂತ್‌ಗಳನ್ನು ಆರಂಭಿಸಲಾಗಿದೆ. ಪರಶುರಾಮಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪಿಂಕ್ ಭೂತ್ ಸಿದ್ದಪಡಿಸಿದ್ದು, ನಗರದ ವಾಲ್ಮೀಕಿ ಬಡಾವಣೆಯಲ್ಲಿರುವ ನವಚೇತನ ಶಾಲೆಯಲ್ಲಿ ಯುವ ಮತದಾರರ ಮತಗಟ್ಟೆಯನ್ನು ಸಿದ್ದಪಡಿಸಲಾಗಿದೆ ಎಂದರು. ಮೇಲ್ಕಂಡ ಎಲ್ಲಾ ಮತಗಟ್ಟೆಗಳಲ್ಲಿ ಕುಡಿಯುವ ನೀರು, ವಿದ್ಯುತ್ ಶೌಚಾಲಯ, ವಿಕಲಚೇತನರ ಮತಚಲಾವಣೆಗೆ ಅನುಕೂಲವಾಗುವಂತೆ ವ್ಹೀಲ್ ಚೇರ್‌ಗಳನ್ನು ಸಹ ವ್ಯವಸ್ಥೆ ಮಾಡಲಾಗಿದೆ ಎಂದರು. ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್, ಎಲೆಕ್ಟ್ರಿಕಲ್ ಇಂಜಿನಿಯರ್ ಚೇತನ್, ಆರೋಗ್ಯ ನಿರೀಕ್ಷಕ ಸುನೀಲ್ ಮುಂತಾದವರು ಭೇಟಿ ನೀಡಿದ್ದರು.

### ಬಿಜೆಪಿ ಒ.ಬಿ.ಸಿ ಮೋರ್ಚಾದಿಂದ ಮತಯಾಚನೆ



» **ಚಿತ್ರದುರ್ಗ**

ಭಾರತೀಯ ಜನತಾ ಪಾರ್ಟಿ ಒ.ಬಿ.ಸಿ ಮೋರ್ಚಾ ಚಿತ್ರದುರ್ಗ ನಗರ ಮಂಡಲ ವತಿಯಿಂದ ಚಿತ್ರದುರ್ಗ ಲೋಕಸಭೆ ಚುನಾವಣಾ ಪ್ರಚಾರದ ಕಾರ್ಯವನ್ನು ನಗರದ 2.3.4. ವಾರ್ಡಿನಲ್ಲಿ ಹಿರಿಯ ನಾಗರಿಕ ಮತದಾರರನ್ನು ನಾಳೆ ನಡೆಯುವ ಗೃಹ ಮತದಾನದಲ್ಲಿ ಈ ದಿವಸ ಸಂಪರ್ಕ ಮಾಡಿ ಅಭ್ಯರ್ಥಿಯ ಬಗ್ಗೆ ಹಾಗೂ ಅಭ್ಯರ್ಥಿಯ ಚಿಹ್ನೆಯ ಬಗ್ಗೆ ಮತದಾರರಿಗೆ ಮಾಹಿತಿ ನೀಡಿ ಬಿ.ಜೆ.ಪಿ.ಗೆ ಮತ ಹಾಕುವಂತೆ ಮನವಿ ಮಾಡಲಾಯಿತು ಈ ಸಂದರ್ಭದಲ್ಲಿ ಒ.ಬಿ.ಸಿ.ನಗರ ಅಧ್ಯಕ್ಷರಾದ ಎನ್. ಕೃಷ್ಣ ಪ್ರಧಾನ ಕಾರ್ಯದರ್ಶಿಗಳಾದ ಆರ್.ನಾಗರಾಜ್ ಹಾಗೂ ಅರುಣ್ ಕುಮಾರ್ ಸದಸ್ಯರಾದ ಸಂತೋಷ್ ಕುಮಾರ್ ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

### ಕರೇಕಲ್ ಶ್ರೀಆಂಜನೇಯ ಸ್ವಾಮಿ ಸನ್ನಿಧಿಯಲ್ಲಿ ಶ್ರೀರಾಮನವಮಿ ಆಚರಣೆ

» **ಚಳ್ಳಕೆರೆ**

ಮರ್ಯಾದ ಪುರುಷೋತ್ತಮ ಪ್ರಭು ಶ್ರೀರಾಮಚಂದ್ರನಜನ್ಮಸ್ಥಾನವಾದಆಯೋಧ್ಯೆಯಲ್ಲಿ ಭವ್ಯವಾದ ರಾಮಮಂದಿರ ನಿರ್ಮಾಣವಾಗಿದ್ದು, ನಾಡಿನ ಜನ ರಾಮಮಂದಿರ ನಿರ್ಮಾಣದ ಬಗ್ಗೆ ಹೆಮ್ಮೆಪಡುವ ಶುಭಸಂದರ್ಭದಲ್ಲಿ ನಾಯಕನಹಟ್ಟಿ ರಸ್ತೆಯ ಶ್ರೀಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಏ.17ರ ಬುಧವಾರ ಶ್ರೀರಾಮನವಮಿ ಪೂಜಾ ಕಾರ್ಯಕ್ರಮದ ಹಮ್ಮಿಕೊಳ್ಳಲಾಗಿದೆ ಎಂದು ವೇದಬ್ರಹ್ಮ ನಾಗಶಯನಗೌತಮ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರತಿವರ್ಷದಂತೆ ಈ ವರ್ಷವೂ ಶ್ರೀಆಂಜನೇಯಸ್ವಾಮಿ ಸನ್ನಿಧಿಯಲ್ಲಿ ಭಕ್ತ ಸಹಕಾರದಿಂದ ರಾಮನವಮಿ ಪೂಜಾ ಕಾರ್ಯಕ್ರಮಗಳು ನಡೆಯಲಿದ್ದು, ಬೆಳಗ್ಗೆ ಅಭಿಷೇಕ, ಅಲಂಕಾರ, ಭಜನೆ, ಅರ್ಚನೆ, ಜೋಗುಳೋತ್ಸವ, ಮಹಾಮಂಗಳಾರತಿ ನಂತರ ಆಗಮಿಸಿದ ಭಕ್ತರಿಗೆ ತೀರ್ಥಪ್ರಸಾದವನ್ನು ನೀಡಲಾಗುವುದು.

# ಏಪ್ರಿಲ್ 18 ಹಾಗೂ 19 ರಂದು ಸಿಇಟಿ, 14 ಕೇಂದ್ರಗಳಲ್ಲಿ ಪರೀಕ್ಷೆ: 6456 ವಿದ್ಯಾರ್ಥಿಗಳು

## ಗೊಂದಲಗಳಿಗೆ ಆಸ್ಪದ ನೀಡದೆ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಿ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

» **ಚಿತ್ರದುರ್ಗ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ನಿರ್ದೇಶನಗಳನ್ನುಪಾಲಿಸುವುದರೊಂದಿಗೆ, ಯಾವುದೇ ಗೊಂದಲಗಳಿಗೆ ಆಸ್ಪದ ನೀಡದೆ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಿಇಟಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಚುನಾವಣೆ ಕಾರ್ಯಗಳಿಗೆ ನಿಯೋಜನೆಗೊಂಡ ಅಧಿಕಾರಿಗಳನ್ನು ಹೊರತುಪಡಿಸಿ, ಬೇರೆ ಅಧಿಕಾರಿಗಳನ್ನು ಪರೀಕ್ಷಾ ಕಾರ್ಯಗಳಿಗೆ ನೇಮಿಸಬೇಕು. ಬಿಸಿಲು ತೀವ್ರತರನಾಗಿರುವುದರಿಂದ ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಚಿತ್ರದುರ್ಗ ನಗರದ 14 ಕಾಲೇಜುಗಳಲ್ಲಿ ಪರೀಕ್ಷಾ ಕೇಂದ್ರಗಳಿವೆ. 6456 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಪರೀಕ್ಷಾ ಅವ್ಯವಹಾರಗಳನ್ನು ತಡೆಯುವ ದೃಷ್ಟಿಯಿಂದ ಪ್ರತಿ ಕೊಠಡಿಯೊಳಗೆ ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು. ಪರೀಕ್ಷೆ ಬರೆಯಲು ಆಗಮಿಸುವ ವಿದ್ಯಾರ್ಥಿಗಳಿಗೆ



ಸಾಮಾನ್ಯ ವಸ್ತ್ರ ಸಂಹಿತೆ ಅನ್ವಯಿಸುತ್ತದೆ. ಪರಿಕ್ಷಾ ಕೇಂದ್ರದೊಳಗೆ ಮೊಬೈಲ್ ಬಳಸಲು ಅವಕಾಶವಿಲ್ಲ. ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಪರೀಕ್ಷಾ ಕೇಂದ್ರಗಳಲ್ಲಿ, ನೊಂದಣಿ ಸಂಖ್ಯೆ, ಕೊಠಡಿ ವಿವರಗಳನ್ನು ಒಳಗೊಂಡ ಸೂಚನಾ ಫಲಕಗಳನ್ನು ಮೂರ್ನಾಲ್ಕು ಕಡೆ ಹಾಕಬೇಕು. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಶೀಟ್‌ಗಳನ್ನು ಕೊಂಡೊಯ್ಯುವ ಮಾರ್ಗಾಧಿಕಾರಿಗಳ ವಿವರಗಳನ್ನು ಆಯಾ ಕೇಂದ್ರಗಳ ಮುಖ್ಯಸ್ಥರಿಗೆ ಮೊದಲೇ ನೀಡಿರಬೇಕು. ನಿಗದಿ ಪಡಿಸಿದ ವೇಳೆ ಸರಿಯಾಗಿ ಖಜಾನಾಧಿಕಾರಿಗಳ ಸಮ್ಮುಖದಲ್ಲಿಯೇ ಸ್ಟ್ರಾಂಗ್ ರೂಮ್‌ಗಳಿಂದ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಬಂಡಲ್‌ಗಳನ್ನು ಮಾರ್ಗಾಧಿಕಾರಿಗಳಿಗೆ ನೀಡಬೇಕು. ಇವುಗಳನ್ನು ಪೊಲೀಸ್ ಭದ್ರತೆಯಲ್ಲಿಯೇ ಸರಬರಾಜು ಮಾಡಬೇಕು. ಪ್ರತಿ ಪರೀಕ್ಷಾ ಕೇಂದ್ರದ ಸುತ್ತ ಇಬ್ಬರು ಪೊಲೀಸರನ್ನು ಭದ್ರತೆಗಾಗಿ ನಿಯೋಜಿಸಬೇಕು. ಪರೀಕ್ಷೆ ಪ್ರಾಧಿಕಾರದ ನಿಯಮಗಳನ್ನು ತಪ್ಪದೆ ಪಾಲಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ಮಾತನಾಡಿ,ಚಿತ್ರದುರ್ಗನಗರದ14ಪರೀಕ್ಷಾ ಕೇಂದ್ರಗಳಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ. ಈ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್‌ಗಳನ್ನು ಸರಬರಾಜು ಮಾಡಲು ಹಾಗೂ ಮರಳಿ ಪಡೆಯಲು 5 ಮಾರ್ಗಾಧಿಕಾರಿಗಳ ತಂಡಗಳನ್ನು ರಚಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು ಸಹ ನೇಮಿಸಲಾಗಿದೆ. ವಿಜ್ಞಾನ ವಿಷಯ ಶಿಕ್ಷಕರನ್ನು ಹೊರತುಪಡಿಸಿ ಬೇರೆ ವಿಷಯಗಳ ಶಿಕ್ಷಕರನ್ನು ಕೊಠಡಿ ಮೇಲ್ವಿಚಾರಕರಾಗಿ ನೇಮಿಸಲಾಗಿದೆ. ಏಪ್ರಿಲ್ 18 ರಂದು ಬೆಳಿಗ್ಗೆ 10:30 ರಿಂದ 11:50 ರವರೆಗೆ ಜೀವಶಾಸ್ತ್ರ, ಮಧ್ಯಾಹ್ನ 2:30 ರಿಂದ 3:50 ವರೆಗೆ ಗಣಿತಶಾಸ್ತ್ರ, ಏಪ್ರಿಲ್ 19 ರಂದು ಬೆಳಿಗ್ಗೆ 10:30 ರಿಂದ 11:50 ರವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2:30 ರಿಂದ 3:50 ವರೆಗೆ ರಸಾಯನಶಾಸ್ತ್ರ ವಿಷಯ ಪರೀಕ್ಷೆಗಳು ನಡೆಯಲಿವೆ. ಪರೀಕ್ಷೆ ಕೇಂದ್ರಗಳ ಸುತ್ತ ನಿಷೇಧಾಜ್ಞೆಯನ್ನು ಹೊರಡಿಸಲು ಜಿಲ್ಲಾಧಿಕಾರಿ ಕಚೇರಿಗೆ ಮನವಿ ಸಲ್ಲಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿತಹಶೀಲ್ದಾರ್‌ಡಾ.ನಾಗವೇಣಿ, ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸೇರಿದಂತೆ ವಿವಿಧ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಹಿರಿಯೂರಿನಲ್ಲಿ ಕಾಂಗ್ರೆಸ್ ಕಹಳೆ: ಬಿಎನ್.ಚಂದ್ರಪ್ಪ

» **ಹಿರಿಯೂರು**


ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರು ಹಾಗು ಸಚಿವರಾದ ಶ್ರೀ ಡಿ.ಸುಧಾಕರ್ ಅವರ ನೇತೃತ್ವದಲ್ಲಿ ಹಿರಿಯೂರು ನಗರದ ಕಡ್ಲೆ ಕಾಯಿ ಮಂಡಿ ಮೈದಾನದಲ್ಲಿ ವಿಧಾನ ಪರಿಷತ್ ಸದಸ್ಯ ಶ್ರೀ ಸಲೀಂ ಅಹ್ಮದ್ ಅವರೊಂದಿಗೆ *ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಶ್ರೀ ಬಿ.ಎನ್. ಚಂದ್ರಪ್ಪ ರವರು* ಚುನಾವಣಾ ಪ್ರಚಾರಕ್ಕೆ ನಡೆಸಿ, ಸಾರ್ವಜನಿಕ ಸಭೆಯಲ್ಲಿ ಮತಯಾಚನೆ ಮಾಡಲಾಯಿತು.

ಈ ವೇಳೆ ಕಾಂಗ್ರೆಸ್ ನ ತತ್ವ ಸಿದ್ಧಾಂತಗಳನ್ನು ಮೆಚ್ಚಿ ಬಿಜೆಪಿ ಮತ್ತು ಜೆಡಿಎಸ್ 500 ಕ್ಕೂ ಹೆಚ್ಚು ಸದಸ್ಯರು ಕಾಂಗ್ರೆಸ್ ಸೇರ್ಪಡೆಯಾದರು.

ಬಿಜೆಪಿಯ ಬೆಲೆ ಏರಿಕೆ ಮತ್ತು ರೈತ ವಿರೋಧಿ ನಡೆಯನ್ನು ಖಂಡಿಸಿ, ದೇಶದ ಸರ್ವತೋಮುಖ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನಗೆ ಆಶೀರ್ವಚನ ಮಾಡುವಂತೆ ಜನರಲ್ಲಿ ಮನವಿ ಮಾಡಿದೆನು.

ಸಚಿವ ಶ್ರೀ ಡಿ.ಸುಧಾಕರ್ ರವರು ಮಾತನಾಡಿ ಹಿರಿಯೂರಿನಲ್ಲಿ ಅಬ್ಬರಿಸುತ್ತಿದೆ ಕಾಂಗ್ರೆಸ್ ಅಲೆ

ಪ್ರಚಾರಕಾರ್ಯಕ್ರಮದಉದ್ದಕ್ಕೂ



ಜನರು ಅಭೂತಪೂರ್ವ ಬೆಂಬಲ ನೀಡುತ್ತಿದ್ದಾರೆ. ಹಿರಿಯೂರಿನ ಜನರು ಕಾಂಗ್ರೆಸ್ ಪಕ್ಷಕ್ಕೆ ಅತಿ ಹೆಚ್ಚು ಮುನ್ನಡೆ ತಂದುಕೊಡಲಿದ್ದಾರೆ ಎಂದು ಹೇಳಿದರು.

ಈ ವೇಳೆ ಮಾಜಿ ಶಾಸಕರಾದ ಶ್ರೀಮತಿ ಪೂರ್ಣಿಮಾ ಶ್ರೀನಿವಾಸ್,ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೀ ಡಿ.ಟಿ ಶ್ರೀನಿವಾಸ್,ಅಸಂಘಟಿತ ಕಾರ್ಮಿಕರ ವಿಭಾಗದ ರಾಜ್ಯಾಧ್ಯಕ್ಷ ಶ್ರೀ ಜಿಎಸ್.ಮಂಜುನಾಥ್, ಚಿತ್ರದುರ್ಗ ಡಿಸಿಸಿ ಅಧ್ಯಕ್ಷ ಶ್ರೀ ಎಂ.ಕೆ.ತಾಜ್ ಪೀರ್,ಚಿತ್ರದುರ್ಗ ಡಿಸಿಸಿ ಮಹಿಳಾ ಜಿಲ್ಲಾಧ್ಯಕ್ಷೆ ಶ್ರೀಮತಿ ಗೀತಾ ನಂದಿನಿ ಗೌಡ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಶ್ರೀ ಖಾದಿ ರಮೇಶ್,ಶ್ರೀ ಈರಲಿಂಗೆಗೌಡ,ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀ ರಾಕ್ ಮಂಜುನಾಥ್ ಸೇರಿದಂತೆ ಮಾಜಿ ಜಿ.ಪಂ ಮತ್ತು ತಾ.ಪಂ ಅಧ್ಯಕ್ಷರು,ಉಪಾಧ್ಯಕ್ಷರು,ಸದಸ್ಯರುಗಳು,ನಗರಸಭೆ ಮಾಜಿ,ಹಾಲಿ ಅಧ್ಯಕ್ಷರು,ಉಪಾಧ್ಯಕ್ಷರು ಮತ್ತು ಸದಸ್ಯರುಗಳು ,ಪಕ್ಷದ ಹಿರಿಯ ಮುಖಂಡರುಗಳು,ಹಾಲಿ ಮತ್ತು ಮಾಜಿ ಗ್ರಾ.ಪಂ ಸದಸ್ಯರು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕುಡಿಯುವ ನೀರಿಗಾಗಿ ಖಾಲಿ ಕೊಡ ಹಿಡಿದು ಪ್ರತಿಭಟನೆ



» **ಪರಶುರಾಂಪುರ**

ಗ್ರಾಮದ ಹುಳ್ಳಿಕಟ್ಟೆಯಲ್ಲಿ ಕುಡಿಯುವ ನೀರಿಗೆ ತೀವ್ರ ತೊಂದರೆಯಾಗಿದ್ದು,ಗ್ರಾಮಸ್ಥರು ಗ್ರಾಪಂ ಮುಂದೆ ಸೋಮವಾರ ಖಾಲಿ ಕೊಡ ಹಿಡಿದು ಪ್ರತಿಭಟನೆ ನಡೆಸಿದರು. ಇಲ್ಲಿ ನೀರಿನ ಸಮಸ್ಯೆ ತೀವ್ರವಾಗಿದ್ದು,ಇದಕ್ಕೆ ಹಲವು ಬಾರಿ ಗ್ರಾಪಂಯ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ನೀರಿಗಾಗಿ ಪರಿತಪಿಸಬೇಕಾಗಿದೆ ಎಂದು ಗ್ರಾಮದ ಜನರು ದೂರಿದ್ದಾರೆ. ಈ ವೇಳೆಯಲ್ಲಿ ಗ್ರಾಮಸ್ಥರಾದ ರಾಮಾಂಜಿನೇಯ,ನಾಗರಾಜು,ವಿರೇಶ್, ದೇವಿರಮ್ಮ,ಗಂಗಮ್ಮ,ರುಕ್ಕಮ್ಮ,ಲಕ್ಷ್ಮೀದೇವಿ,ಅನಿತಾ,ಚೌಡಮ್ಮ,ವಸೂರಮ್ಮ,ಪ್ರಕಾಶ್,ಮೂರ್ತಿ,ವೀರಾಂಜಿ,ಮಣಿ,ಈರಣ್ಣ,ಮಹತ್ಮಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ಚುನಾವಣಾ ಸಭೆಯಲ್ಲಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಹೇಳಿಕೆ

# ಕಾಂಗ್ರೆಸ್‌ನಲ್ಲಿ ಪ್ರಧಾನಿ ಆಗುವ ಒಬ್ಬರೂ ನಾಯಕರಿಲ್ಲ

» **ಹೊಸದುರ್ಗ**

ದೇಶದ 140 ಕೋಟಿ ಜನರು ಮತ್ತೊಮ್ಮೆ ನರೇಂದ್ರ ಮೋದಿಯವರೇ ಈ ದೇಶದ ಪ್ರಧಾನಮಂತ್ರಿಆಗಬೇಕೆಂದುಬಯಸಿದ್ದಾರೆ. ನಾವು ಎಲ್ಲಿಯೇ ಪ್ರಚಾರಕ್ಕೆ ಹೋದರು, ಜನರು ನಾವು ಮೋದಿಯವರಿಗೆ ವೋಟ್ ಹಾಕುತ್ತೇವೆ ಎನ್ನುತ್ತಿದ್ದು, ದೇಶದ ಜನರು ಜಾಗೃತರಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್ ನವರು ಮೋದಿಯವರ ವಿರುದ್ಧ ಆಪಾದನೆಗಳನ್ನು ಮಾಡುತ್ತಾರೆ. ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನ ಮಂತ್ರಿ ಆಗುವ ಯೋಗ್ಯತೆ ಇರುವ ನಾಯಕರು ಒಬ್ಬರು ಇಲ್ಲವೆಂದು ಕಾಂಗ್ರೆಸ್ ನಾಯಕರ ವಿರುದ್ಧ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ವಾಗ್ದಾಳಿ ನಡೆಸಿದರು.

ತಾಲ್ಲೂಕಿನ ಶ್ರೀರಾಂಪುರದಲ್ಲಿ ಆಯೋಜಿಸಿದ್ದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಪ್ರಚಾರ ಸಭೆಯ ನೇತೃತ್ವವಹಿಸಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ಬಂದು 60 ವರ್ಷ ಕಳೆದರೂ, ಭ್ರಷ್ಟಾಚಾರ ಮಾಡಿ ಬಹಳಷ್ಟು ನಾಯಕರು ಬೇಲ್ ಮೇಲೆ ಹೊರಗಡೆ ಇದ್ದಾರೆ. ಇಂತಹ ಪರಿಸ್ಥಿತಿ ಕಾಂಗ್ರೆಸ್ ನಾಯಕರಿಗೆ ಬಂದಿದೆ. ಇಲ್ಲಿಯವರೆಗೂ ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರು ಎಂದು ಹೇಳಿಲ್ಲ. ಅವರಿಂದ ಸುಭದ್ರವಾದ ಸರ್ಕಾರ ರಚನೆ ಮಾಡಬೇಕಾ ಸಾಧ್ಯವಿಲ್ಲ. 275 ಸೀಟ್ ಗೆಲ್ಲುವ ತಾಕತ್ತು ಕಾಂಗ್ರೆಸ್ಗೆ



ಎಲ್ಲಿದೆ? ಎಂದು ಪ್ರಶ್ನಿಸಿದರು.

ಚುನಾವಣೆಗೆ ಕೇವಲ 10 ದಿನಗಳಿದ್ದು, ಕಾರ್ಯಕರ್ತರು ಬಿಜೆಪಿ ಪಕ್ಷದ ಪರವಾಗಿ ಮತ ಯಾಚನೆ ಮಾಡಬೇಕು. ದೇಶದ ಅಭಿವೃದ್ಧಿ, ಸುಭ್ರದತೆಗಾಗಿ ಚುನಾವಣೆ. ಕಾಂಗ್ರೆಸ್ ಮೋಸ ಮಾಡಿ, ಜಾತಿ, ಧರ್ಮ ಮಧ್ಯೆ ವಿಷಬೀಜ ಬಿತ್ತಿದರು, ದೇಶದ ಅಭಿವೃದ್ಧಿ ಮಾಡಲಿಲ್ಲ. ಆದರೆ ನರೇಂದ್ರ ಮೋದಿ ಇಂದು ಭಾರತ ಶ್ರೀಮಂತ ರಾಷ್ಟ್ರಗಳಲ್ಲಿ 5ನೇ ಸ್ಥಾನದಲ್ಲಿದ್ದೇವೆ. ಕಾಂಗ್ರೆಸ್ ಮೋಸದಾಟದಿಂದ ದೇಶದ ಉದ್ದಗಲಕ್ಕೂ ಜನರ ನೆಮ್ಮದಿ ಹಾಳುಮಾಡಿದ್ದಾರೆ. ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ₹1 ಲಕ್ಷ ಕೊಡುತ್ತೀವಿ, ಸಾಲ ಮನ್ನಾ ಮಾಡ್ತೀವಿ, ಯುವಕರಿಗೆ ₹1 ಲಕ್ಷ ಕೊಡುತ್ತೇವೆ ಎಂದಿದ್ದಾರೆ. ₹40 ಲಕ್ಷ ಕೋಟಿ ಬಜೆಟ್ ನಲ್ಲಿ ₹ 50 ಲಕ್ಷ ಕೊಡೋದು ಹೇಗೆ?. ಇದು ಅಧಿಕಾರಕ್ಕೆ ಬರುವವರ ಲಕ್ಷಣವಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

'ಉಚಿತ ಕೋವಿಡ್ ಲಸಿಕೆ ನೀಡಿದ್ದಾರೆ. ಅಂದು ಬದುಕಿದ್ದು ಮೋದಿಯಿಂದ, ಅವರ ಋಣ ತೀರಿಸಬೇಕು. ಜೀವಕೊಟ್ಟವರಿಗೆ ಮತ ಹಾಕಿ, ಋಣ ತೀರಿಸಿ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ಬರ ಬಂದಿದೆ. ಅವರ ಪಾಪದ ಪ್ರತಿಫಲವಾಗಿ ಮಳೆ ಬರುತ್ತಿಲ್ಲ. ಕಾಂಗ್ರೆಸ್ ದುರಾಡಳಿತ ಮಾಡಿದೆ. ಅದರಲ್ಲಿರುವ ಎಲ್ಲರೂ ಜೈಲಿಗೆ ಹೋಗಿ ಬಂದಿದ್ದಾರೆ. ನಿತ್ಯ ನ್ಯಾಯಾಲಯಕ್ಕೆ ತಿರುಗಾಡುತ್ತಿದ್ದಾರೆ. ನರೇಂದ್ರ ಮೋದಿ ಒಬ್ಬ ಸಂತರಿದ್ದಂತೆ, ಅವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಬೇಕೆಂದು ಮನವಿ ಮಾಡಿದರು.

ಮಧುರೆ, ಮಾಡದಕೆರೆ, ಮತ್ತೋಡು, ಶ್ರೀರಾಂಪುರ, ಬೆಲಗೂರು ಹಾಗೂ ಪಟ್ಟಣ ಸೇರಿದಂತೆ ಹಲವೆಡೆ ನೂರಾರು ಕಾರ್ಯಕರ್ತರ ಜೊತೆಗೂಡಿ ಪ್ರಚಾರ ನಡೆಸಿದರು.

ಇದೇ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಜಯಣ್ಣ, ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ್ ಗೂಳಿಹಟ್ಟಿ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಗಣೇಶ್ ಮೂರ್ತಿ, ಬಿಜೆಪಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಜಗದೀಶ್ ರಾಮಯ್ಯ, ಶ್ರೀರಾಂಪುರ ಗ್ರಾ.ಪಂ ಅಧ್ಯಕ್ಷ ರಂಗಸ್ವಾಮಿ, ಮುಖಂಡರುಗಳಾದ ಗೂಳಿಹಟ್ಟಿ ಕೃಷ್ಣಮೂರ್ತಿ, ಲಕ್ಷ್ಮಣ್, ಪರುಶುರಾಮಪ್ಪ, ತಿಪ್ಪೇಸ್ವಾಮಿ, ವಕೀಲರ ಸಂಘದ ಅಧ್ಯಕ್ಷ ರವಿಕುಮಾರ್, ಮೈಲಾರಪ್ಪ, ನಾಗರಾಜ್, ಪಂಪ, ಮಂಜುನಾಥ್, ಹೆಗ್ಗೆರೆ ಶಂಕ್ರಪ್ಪ, ರಮೇಶ್, ಮಲ್ಲಿಕಾರ್ಜುನ್ ಸೇರಿದಂತೆ ಬಿಜೆಪಿ ಜೆಡಿಎಸ್ ಕಾರ್ಯಕರ್ತರಿದ್ದರು.

> ಶತ್ರು ರಾಷ್ಟ್ರಗಳನ್ನ ಸದೆ ಬಡಿಯಲು ಪ್ರಧಾನಿ ನರೇಂದ್ರ ಮೋದಿಯಿಂದ ಮಾತ್ರ ಸಾಧ್ಯ, ಇದೊಂದು ದೇಶ ಕಟ್ಟುವ ಪುಣ್ಯಕಾರ್ಯ ಎಂದು ಕಾರ್ಯಕರ್ತರು ಕೆಲಸ ಮಾಡಬೇಕು. 500 ವರ್ಷಗಳ ವಿವಾದದ ಅಯೋಧ್ಯೆಯ ಶ್ರೀರಾಮ ಮಂದಿರದ ಪುನರ್ ಪ್ರಾಣ ಪ್ರತಿಷ್ಠಾಪನೆ ಮಾಡಿದ ಕೀರ್ತಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಮುತ್ಸದ್ದಿ ಕ್ರಿಯಾಶೀಲ ವ್ಯಕ್ತಿತ್ವದ ಗೋವಿಂದ ಕಾರಜೋಳರವರನ್ನ ಬೆಂಬಲಿಸಿ ಚಿತ್ರದುರ್ಗ ಕ್ಷೇತ್ರದ ಅಭಿವೃದ್ಧಿಯನ್ನು ಮಾಡಿಸೋಣ.
>
> » **ಎಸ್, ಲಿಂಗಮೂರ್ತಿ, ಚಿತ್ರದುರ್ಗ ಜಿಲ್ಲಾ ಚುನಾವಣಾ ಸಂಚಾಲಕ. ಹಾಗೂ ರಾಜ್ಯ ಖನಿಜ ನಿಗಮ ಮಾಜಿ ಅಧ್ಯಕ್ಷ,**

## ಫಾಸ್ಟ್ ನ್ಯೂಸ್



ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ಮಂಜೂರು ಮಾಡಿರುವ ಒಂದು ಲಕ್ಷ ರೂ.ಗಳ ಡಿ.ಡಿ. ದೇವಸ್ಥಾನ ಸಮಿತಿ ಅಧ್ಯಕ್ಷರಿಗೆ ವಿತರಣೆ.

### ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ರಾಮನವಮಿ



» ಚಳ್ಳಕೆರೆ

ನಗರದ ವಾಲ್ಮೀಕಿ ಬಡಾವಣೆಯಲ್ಲಿರುವ ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ಏ.17ರ ಬುಧವಾರ ಶ್ರೀರಾಮನವಮಿ ಕಾರ್ಯಕ್ರಮವನ್ನು ಭಕ್ತಿ ಶ್ರದ್ಧೆಯಿಂದ ನಡೆಸಲಾಗುವುದು ಎಂದು ವಿಚಾರಣಾಕರ್ತರಾದ ಶ್ರೀನಾಥಭಟ್, ಗುರುನಾಥಭಟ್, ಕಿಶೋರ್, ಎಂ.ಪಿ.ಗುರುರಾಜ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಅಂದು ಬೆಳಗ್ಗೆ 6 ಗಂಟೆಗೆ ಜಲಾಭಿಷೇಕದೊಂದಿಗೆ ಕಾರ್ಯಕ್ರಮ ಆರಂಭವಾಗುವುದು ನಂತರ 8ಕ್ಕೆ ಪಂಚಾಮೃತಾಭಿಷೇಕ, 10ಕ್ಕೆ ತುಳಸಿಪುಷ್ಪಾಲಂಕಾರ ಅರ್ಚನೆ ಕಾರ್ಯಕ್ರಮ ನಡೆಯಲಿದೆ. ವಿಶೇಷವಾಗಿ ಸಂಜೆ 6.15ಕ್ಕೆ ಸೀತಾ ರಾಮ ಲಕ್ಷ್ಮಣರ ಉತ್ಸವ ಮೂರ್ತಿಗಳನ್ನು ರಥದಲ್ಲಿಟ್ಟು ಒಳಾಂಗಣ ಪ್ರಾಂಗಣದಲ್ಲೇ ರಥೋತ್ಸವ ನಡೆಸಲಾಗುವುದು. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿ ಶ್ರೀಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ವ್ಯವಸ್ಥಾಪಕರಾದ ಶ್ರೀನಾಥಆಚಾರ್ಯ, ಸೇವಾಕರ್ತ ರಾದ ಜಿ.ಕೃಷ್ಣಮೂರ್ತಿ, ಅಮರನಾಥಗುಪ್ತ, ಎಂ.ಸತ್ಯನಾರಾಯಣರಾವ್ ಮನವಿ ಮಾಡಿದ್ದಾರೆ.

### ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

» ದಾವಣಗೆರೆ

ಭಾರತ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಜೂನಿಯರ್ ಇಂಜಿನಿಯರ್ (ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್ಸ್) ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಯನ್ನು 2024 ರ ಜೂನ್ ನಲ್ಲಿ ಆಯೋಜಿಸಿದೆ. ಈ ಹುದ್ದೆಗಳಿಗೆ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಇಂಜಿನಿಯರಿಂಗ್ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಈ ಹುದ್ದೆಗಳಿಗೆ ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ ಮೂಲಕ www.ssckkr.kar.nic.in & https://ssc.gov.in ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 18 ಕೊನೆಯ ದಿನವಾಗಿರುತ್ತದೆ. ವಯೋಮಿತಿ 2024 ರ ಆಗಸ್ಟ್ 1 ಕ್ಕೆ ಸಾಮಾನ್ಯ ವರ್ಗ 30 ವರ್ಷ, ಎಸ್‌ಸಿ, ಎಸ್‌ಟಿ, ಈಎಸ್‌ಎಂ, ಓಬಿಸಿ, ಪಿಡಬ್ಲ್ಯೂಡಿ ವರ್ಗದವರಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 080-2527342,25502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ ದೂ.ಸಂ:08192-259446 ಇಲ್ಲಿಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ರವೀಂದ್ರ.ಡಿ.ತಿಳಿಸಿದ್ದಾರೆ.

### ಮಾಜಿ ಸೈನಿಕರ ಮಕ್ಕಳಿಗೆ ಆರ್ಥಿಕ ನೆರವಿಗೆ ಆನ್‌ಲೈನ್‌ನಲ್ಲಿ ಅರ್ಜಿ

» ದಾವಣಗೆರೆ

ಒಂದನೇ ತರಗತಿಯಿಂದ ವೃತ್ತಿಪರ ಶಿಕ್ಷಣವಲ್ಲದ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಹವಾಲ್ದಾರ್ ರ‍್ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳು ಕೇಂದ್ರೀಯ ಸೈನಿಕ ಮಂಡಳಿಯಿಂದ ಆರ್ಥಿಕ ನೆರವನ್ನು ಪಡೆಯಲು ಕೇಂದ್ರೀಯ ಸೈನಿಕ ಮಂಡಳಿಯ ಜಾಲ ತಾಣ ONLINE.KSB. GOV.IN ನಲ್ಲಿ ಆರ್ಥಿಕ ನೆರವು (ಫೈನಾನ್ಸಿಯಲ್ ನ್ಸ್) ಎಂಬ ಶೀರ್ಷಿಕೆಯಡಿಯಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿವಾಗಿರುತ್ತದೆ. ಕೇಂದ್ರೀಯ ಸೈನಿಕ ಮಂಡಳಿಯ ಮಾರ್ಗಸೂಚಿಯಂತೆ ಅರ್ಜಿ ಸಲ್ಲಿಸಿದ ಪ್ರತಿ ಹಾಗೂ ಸಂಬಂಧಿತ ಎಲ್ಲಾ ಮೂಲ ದಾಖಲಾತಿಗಳೊಂದಿಗೆಸೈನಿಕಕಲ್ಯಾಣಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ಅನುಮೋದನೆ ಪಡೆಯಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇಲ್ಲಿ ಅಥವಾ ದೂರವಾಣಿ ಸಂಖ್ಯೆ 08182-220925 ಗೆ ಸಂಪರ್ಕಿಸಲು ಉಪನಿರ್ದೇಶಕರಾದ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

# ಸಂವಿಧಾನದಿಂದ ವಿಶ್ವದಲ್ಲಿಯೇ ದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತ: ಜಿಲ್ಲಾಧಿಕಾರಿ ಡಾ.ವೆಂಕಟೇಶ್

» ದಾವಣಗೆರೆ

ಡಾ. ಬಿ.ಆರ್ ಅಂಬೇಡ್ಕರ್ ರವರು ಹಾಕಿಕೊಟ್ಟಂತಹ ಸಂವಿಧಾನದಿಂದ ಭಾರತ ವಿಶ್ವದಲ್ಲಿಯೇ ಒಂದು ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿ ಯಶಸ್ಸು ಕಂಡಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ. ತಿಳಿಸಿದರು.

ಭಾನುವಾರ ಏ.14 ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ತುಂಗಭದ್ರಾ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ 133 ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ನಂತರ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಡಾ.ಬಿ.ಆರ್. ಅಂಬೇಡ್ಕರ್ ಅವರು ಚಿಕ್ಕ ವಯಸ್ಸಿನಿಂದಲೆ ಸಾಕಷ್ಟು ಕಷ್ಟ, ಅಸ್ಪೃಶ್ಯತೆಯನ್ನು ಎದುರಿಸಿದ್ದಾರೆ. ಆದರೂ ಎಂತಹ ಕಷ್ಟಗಳು ಬಂದರೂ ಸಹ ಆತ್ಮಸ್ಥೈರ್ಯ ಕಳೆದುಕೊಳ್ಳದೆ ಸಮಾಜದಲ್ಲಿರುವ ಸಂಘರ್ಷಗಳನ್ನ ಸಮರ್ಥವಾಗಿ ಎದುರಿಸಿ ಭಾರತ ದೇಶದ ರತ್ನವಾಗಿ ಅವರು ಬೆಳೆದರು. ಅಂತಹ ಆದರ್ಶ ಪುರುಷನನ್ನ ನಾವೆಲ್ಲರೂ ಸ್ಮರಿಸುವ ದಿನ ಇದಾಗಿದ್ದು ಅವರು ತಮ್ಮ ನಿರಂತರ ಅಧ್ಯಯನಶೀಲತೆಯಿಂದ ವಿಶ್ವವೇ ಬೆರಗಾಗುವಂತೆ ಮಾಡಿದ್ದಾರೆ ಎಂದರು.

ಅವರು ನ್ಯೂಯಾರ್ಕ್ ಕೊಲಂಬಿಯಾ ವಿಶ್ವವಿದ್ಯಾನಿಲಯದಲ್ಲಿ ಸಂಶೋಧನಾ



ಪದವಿ ಪಡೆದು, ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ನಲ್ಲಿ ಪದವಿ ಪಡೆದರು.

ಕೊಲಂಬಿಯಾ ವಿಶ್ವವಿದ್ಯಾನಿಲಯ ಅಧ್ಯಯನ ವರದಿಯನ್ವಯ ಇಲ್ಲಿ ಅಭ್ಯಾಸ ಮಾಡಿದಂತಹ ವಿದ್ಯಾರ್ಥಿಗಳಲ್ಲಿ ಇಡೀ ವಿಶ್ವದಲ್ಲಿ ಹೆಚ್ಚು ಪ್ರಭಾವವುಂಟು ಮಾಡಿದವರಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರು ಪ್ರಥಮ ಆದ್ಯತೆಗೆ ಬರುತ್ತಾರೆ ಎಂದು ತಿಳಿಸಿದರು.ಡಾ.ಬಾಬಾ ಸಾಹೇಬರು ಹಾಕಿಕೊಟ್ಟಂತಹ ಆದರ್ಶಗಳು, ತತ್ವಗಳು, ಸಿದ್ಧಾಂತಗಳು, ಸಕರಾತ್ಮಕ ಪರಿಣಾಮವನ್ನು ಉಂಟು ಮಾಡಿವೆ. ಇದು ಒಂದು ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಅವರು ಕಾರಣೀಭೂತರಾಗಿದ್ದಾರೆ ಎಂಬುದನ್ನು ಇಡೀ ವಿಶ್ವಕ್ಕೆ ತೋರಿಸಿಕೊಡಲಾಗಿದೆ. ಅಂತಹ ಅಧ್ಯಯನ ಮಾಡಿರುವ ಡಾ.ಬಿ.ಆರ್ .ಅಂಬೇಡ್ಕರ್ ಅವರಿಗೆ ನಾವೆಲ್ಲರೂ ಋಣಿಯಾಗಿರಬೇಕಾಗಿರುತ್ತದೆ ಎಂದರು.

ಅಂಬೇಡ್ಕರ್ ಅವರು ರಚಿಸಿದಂತಹ ಸಂವಿಧಾನವನ್ನು ಇನ್ನೂ ಆಳವಾಗಿ ಅಧ್ಯಯನ ಮಾಡಬೇಕು, ಅದರಲ್ಲಿ ಸಮಾನತೆ, ಬ್ರಾತೃತ್ವದ ಪರಿಕಲ್ಪನೆಗಳು, ಸಮ ಸಮಾಜದ ಸೃಷ್ಟಿ ಮಾಡಬೇಕೆಂಬ ದೃಷ್ಟಿಕೋನ, ಉತ್ತಮ ಸಮಾಜವನ್ನು ನಿರ್ಮಾಣ ಮಾಡಲಿದೆ. ಅಂತಹ ಆದರ್ಶ ಪುರುಷ ಹಾಕಿಕೊಟ್ಟಂತಹ ಸಿದ್ಧಾಂತಗಳನ್ನು ಪಾಲಿಸಿ ಅಸ್ಪೃಶ್ಯತೆ ವಿರೋಧಿಗಳಾಗಿ, ಸಮ ಸಮಾಜದ ನಿರ್ಮಾಣ ಮಾಡಲು ನಾವು ಕೂಡ ಕಾರಣಭೂತರಾಗೋಣ ಎಂದು ಹೇಳಿದರು.

ಮೇ 7ನೇ ರಂದು ಲೋಕಸಭಾ ಚುನಾವಣೆ ಮತದಾನ ನಡೆಯುತ್ತಿದೆ, ಡಾ.ಬಿ.ಆರ್.ಅಂಬೇಡ್ಕರ್ ರವರ ಪರಿಶ್ರಮಕ್ಕೆ ಸಾಕಾರವಾಗಿ 18 ವರ್ಷ ತುಂಬಿದ ಪ್ರತಿಯೊಬ್ಬರು ಅಂದು ಮತಗಟ್ಟೆಗೆ ಬಂದು ಮುಕ್ತ, ನ್ಯಾಯಸಮ್ಮತವಾಗಿ, ಮತದಾನ ಮಾಡಿ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವಲ್ಲಿ ಸಾರ್ಥಕತೆ ಮೆರೆಯೋಣ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಅಂಬೇಡ್ಕರ್ ಅವರ ಜೀವನ ನಮಗೆ ಆದರ್ಶ, ಸ್ಫೂರ್ತಿ, ಅವರಿಗೆ ಎಷ್ಟೇ ಕೊರತೆಗಳು ಇದ್ದರೂ ಕೂಡ ಅವರು ಶಿಕ್ಷಣ ಪಡೆದರು. ಉನ್ನತ ವ್ಯಾಸಂಗ ಮಾಡಿದರು, ತದನಂತರ ಸಮಾಜದಲ್ಲಿ ಇರುವಂತಹ ಪಿಡುಗುಗಳ, ಲೋಪದೋಷಗಳ ವಿರುದ್ಧ ಸಾಕಷ್ಟು ಹೋರಾಟದ ಮೂಲಕ ಜನರನ್ನು ಸಂಘಟಿತರನ್ನಾಗಿ ಮಾಡಿದರು.

ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾಗಿ ಸಂವಿಧಾನ ಶಿಲ್ಪಿಯಾಗಿ ಎಲ್ಲಾ ಪಿಡುಗುಗಳನ್ನು ಹೊಡೆದು ಹಾಕುವ ನಿಟ್ಟಿನಲ್ಲಿ ನಮಗೆಲ್ಲರಿಗೂ ಅಧಿಕಾರ, ಮೂಲಭೂತ ಹಕ್ಕುಗಳು, ಸಾಂವಿಧಾನಿಕ ಹಕ್ಕುಗಳು ಹಾಗೂ ಕಾನೂನಾತ್ಮಕ ಹಕ್ಕುಗಳನ್ನು ಕೊಟ್ಟಿದ್ದಾರೆ. ಸಮ ಸಮಾಜದ ನಿರ್ಮಾಣಕ್ಕಾಗಿ ಅವರ ಕೊಡುಗೆ ಅಪಾರವಾಗಿದೆ. ಹಾಗಾಗಿ ಅವರು ಕೊಟ್ಟಿರುವಂತಹ ಎಲ್ಲಾ ತತ್ವಗಳು, ಆದರ್ಶಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ. ಇದು ಕೇವಲ ಮಾತಿನ ಚಾಟಿಯಾಗದೆ ಜೀವನ ಮತ್ತು ವೃತ್ತಿಯಲ್ಲಿ ಅಳವಡಿಸಿಕೊಂಡು ತೋರಿಸಿದಾಗ ಡಾ.ಬಿ.ಆರ್.ಅಂಬೇಡ್ಕರ್ ಅವರ ಪರಿಶ್ರಮ ಸಾರ್ಥಕತೆಯಾಗುತ್ತದೆ ಎಂದು ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಶಿಕ್ಷಣಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ರಂಗಸ್ವಾಮಿ.ಸಿ ಉಪನ್ಯಾಸ ನೀಡಿದರು.

ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್. ಬಳ್ಳಾರಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ ಸಂತೋಷ್, ತಹಶೀಲ್ದಾರ ಅಶ್ವಥ್ ಸಿ, ಯೋಜನಾ ನಿರ್ದೇಶಕ ಮಹಾಂತೇಶ್ ಇನ್ನಿತರರು ಉಪಸ್ಥಿತರಿದ್ದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್ ಸ್ವಾಗತಿಸಿದರು.

### ಅಂಬೇಡ್ಕರ್ ಜಯಂತಿಯಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಗ್ ಅಭಿಮತ

## ಅಂಬೇಡ್ಕರ್ ತತ್ವಾದರ್ಶದಿಂದ ಸಮ ಸಮಾಜ

» ಚಿತ್ರದುರ್ಗ

ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವಾದರ್ಶ ಅಳವಡಿಸಿಕೊಂಡು ಪಾಲಿಸುವ ಮುಖಾಂತರ ಸಮ ಸಮಾಜ, ಜಾತಿ ವ್ಯವಸ್ಥೆ ಮೀರಿದ ಸಮಾಜ ನಿರ್ಮಾಣದಲ್ಲಿ ಕೈಜೋಡಿಸಲು ಸರ್ವರೂ ದಿಟ್ಟ ಹೆಜ್ಜೆ ಇಡಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಗ್ ಹೇಳಿದರು.

ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾದ ಅಂಬೇಡ್ಕರ್‌ರವರ 133ನೇ ಜಯಂತಿಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಅಸ್ಪೃಶ್ಯತೆಯಂತಹ ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಡಿ, ಶಿಕ್ಷಣದಿಂದಲೇ ಅಭಿವೃದ್ಧಿ ಸಾಧ್ಯ ಎಂಬ ನಿಲುವು ಹೊಂದಿದ್ದರು ಎಂದು ಹೇಳಿದರು.

ಪ್ರಾದೇಶಿಕ ಸಾರಿಗೆ ಕಛೇರಿ ಅಧೀಕ್ಷಕ ಹೇಮಂತ್ ಕುಮಾರ್ ಮಾತನಾಡಿ, ನಾವೆಲ್ಲರೂ



ತಿಳಿದಿರುವಂತೆ ಅಂಬೇಡ್ಕರ್‌ರವರು ಸಂವಿಧಾನ ಶಿಲ್ಪಿ ಎಂದಷ್ಟೇ. ಅದಲ್ಲದೇ ಅವರು ನುರಿತ ಆರ್ಥಿಕ ತಜ್ಞರೂ ಕೂಡ ಆಗಿದ್ದರು. ಇವರು ಕೈಗೊಂಡ ಅಧ್ಯಯನ ಹಾಗೂ ಇವರಿಗಿರುವ ಜ್ಞಾನಸಂಪತ್ತಿಗೆ ಕೊಲಂಬಿಯಾ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ವಿದೇಶಿ ವಿದ್ಯಾಲಯದಿಂದ ಪದವಿ ಪಡೆದ ಮೊದಲಿಗನೆಂಬ ಖ್ಯಾತಿ ಅಂಬೇಡ್ಕರ್‌ರವರಿಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ನೀನಾಸಂ ಕಲಾವಿದರು ಹಾಗೂ ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆಯ ಮೋಟಾರು ವಾಹನ ನಿರೀಕ್ಷಕರು ಹಾಗೂ ಇತರೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಅಂಬೇಡ್ಕರ್ ಜಯಂತಿ ಆಚರಿಸದ ಗ್ರಾಪಂ ಪಿಡಿಓ ವಿರುದ್ಧ ಪ್ರತಿಭಟನೆ



» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ತೇಕಲವಟ್ಟಿ ಗ್ರಾಮ ಪಂಚಾಯಿತಿಯಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ಆಚರಿಸದೆ ಅವಮಾನ ಮಾಡಿರುವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜನಾಯ್ಕನ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ತೇಕಲವಟ್ಟಿ ಗ್ರಾಮಸ್ಥರು ಹಾಗೂ ಕರುನಾಡ ವಿಜಯಸೇನೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ಗ್ರಾಮ ಪಂಚಾಯಿತಿ ಪಿಡಿಓ. ಮಂಜನಾಯ್ಕನ ವಿರುದ್ಧ ಧಿಕ್ಕಾರಗಳನ್ನು ಕೂಗಿ ಸೇವೆಯಿಂದ ಅಮಾನತ್ತುಗೊಳಿಸುವಂತೆ ಒತ್ತಾಯಿಸಿದರು.

ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯಾಧ್ಯಕ್ಷ ಅಣ್ಣಪ್ಪ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಹಿರಿಯೂರು ತಾಲ್ಲೂಕು ಅಧ್ಯಕ್ಷ ತಿಪ್ಪೇಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ಯರ್ರಿಸ್ವಾಮಿ, ತೇಕಲವಟ್ಟಿ ಗ್ರಾಮ ಪಂಚಾಯಿತಿ ಸದಸ್ಯ ನಾಗರಾಜ್ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಚುನಾವಣೆಯಲ್ಲಿ ಪ್ರತಿ ಮತ ಅಮೂಲ್ಯ, ಮತದಾನ ಪವಿತ್ರ

ದಾವಣಗೆರೆ: ಚುನಾವಣೆಯಲ್ಲಿ ಪ್ರತಿಯೊಬ್ಬರ ಮತ ಅಮೂಲ್ಯವಾಗಿದ್ದರೆ, ಮತದಾನ ಪವಿತ್ರ ಕೆಲಸವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್ ತಿಳಿಸಿದರು.ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿ ಹಾಗೂ ಗೃಹರಕ್ಷಕದಳ ವತಿಯಿಂದ ನಗರದ ಪೊಲೀಸ್ ಕವಾಯತು ಮೈದಾನದಿಂದ ಮತದಾನ ಜಾಗೃತಿ ಅಂಗವಾಗಿ ಏರ್ಪಡಿಸಿದ ಕಾಲ್ನಡಿಗೆ ಜಾಥಾ ಉದ್ದೇಶಿಸಿ ಮಾತನಾಡಿದರು.ಜಿಲ್ಲೆಯಲ್ಲಿ ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಶೇ.85 ರಷ್ಟು ಮತದಾನವಾಗಬೇಕು. ಈ ನಿಟ್ಟಿನಲ್ಲಿ ಪ್ರತಿಯೊಂದು ಮತ ಅತ್ಯಮೂಲ್ಯವಾದದು. ಪ್ರತಿಯೊಬ್ಬರು ಮೇ 7 ರಂದು ತಮ್ಮ ನಡಿಗೆ ಮತಗಟ್ಟೆ ಕಡೆಗಿರಲಿ ಎಂದರು.ಜಾಥಾ ಕಾರ್ಯಕ್ರಮಕ್ಕೆ ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ. ಸಂತೋಷ್ ಚಾಲನೆ




ನೀಡಿದರು. ಗೃಹರಕ್ಷಕ ದಳ ಜಿಲ್ಲಾ ಕಮಾಂಡೆಂಟ್ ಸುಜಿತ್ ಕುಮಾರ್ ಮಾತಾನಾಡಿ, ನಮ್ಮ ಜಿಲ್ಲೆಯಲ್ಲಿ ಚುನಾವಣೆ ಕರ್ತವ್ಯ ನಿರ್ವಹಿಸಲು ಸುಮಾರು 550 ಗೃಹರಕ್ಷಕದಳ ಸಿಬ್ಬಂದಿಯನ್ನು ನೇಮಕ ಮಾಡಲಾಗಿದ್ದು, ಇತರೆ ತಾಲ್ಲೂಕಿಗೆ 450 ಜನರನ್ನು ನೇಮಕ ಮಾಡಲಾಗಿದೆ ಎಂದರು.

ಗೃಹರಕ್ಷಕ ದಳದ ಘಟಕಾಧಿಕಾರಿಗಳಾದ ರಾಘವೇಂದ್ರ, ಅಭಿಷೇಕ್, ಶರಣಬಸವ, ಸಿಬ್ಬಂದಿಗಳಾದ ಸರಸ್ವತಿ ಹಾಗೂ ಗೃಹ ರಕ್ಷಕದಳದ ಸಿಬ್ಬಂದಿಗಳು ಉಪಸ್ಥಿತಿರಿದ್ದರು.



ಚಿತ್ರದುರ್ಗ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ರಾಜ್ಯಾಧ್ಯಕ್ಷ ಧರ್ಮಸೇನರವರು ಕಾಂಗ್ರೆಸ್ ಕಚೇರಿಗೆ ಆಗಮಿಸಿದ ಸಂದರ್ಭದಲ್ಲಿ ಸಾಮಾಜಿಕ ಸಂಘರ್ಷ ಸಮಿತಿಯ ಕೆ. ಕುಮಾರ್ ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು.

**ಪ್ರಮುಖ ಸುದ್ದಿ**

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅಂಬೇಡ್ಕರ್ ಜಯಂತಿ

» ಚಿತ್ರದುರ್ಗ

ಪ್ರಪಂಚಕ್ಕೆ ಮಾದರಿಯಾಗಿರುವ ಸಂವಿಧಾನವನ್ನು ಡಾ.ಬಿ.ಆರ್. ಅಂಬೇಡ್ಕರ್ ದೇಶಕ್ಕೆ ನೀಡಿದ್ದಾರೆಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ಜಿಲ್ಲಾಕಾಂಗ್ರೆಸ್‌ಕಚೇರಿಯಲ್ಲಿಭಾನುವಾರ ಡಾ.ಬಿ.ಆರ್.ಅಂಬೇಡ್ಕರ್‌ರವರ 133 ನೇ ಜಯಂತಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಕೇವಲ ದಲಿತರಿಗಷ್ಟೆ ಸಂವಿಧಾನ ನೀಡಿಲ್ಲ. ಎಲ್ಲಾ ಜಾತಿ ಧರ್ಮದವರಿಗೂ ಸಮಾನತೆ ಕಲ್ಪಿಸಿದ್ದಾರೆ. ಸ್ವಾತಂತ್ರ್ಯ ಪೂರ್ವದಲ್ಲಿ ನಮ್ಮ ದೇಶಕ್ಕೆ ಯಾವುದೇ ವ್ಯವಸ್ಥಿತವಾದ ಸಂವಿಧಾನವಿರಲಿಲ್ಲ. ರಾಜಕೀಯ, ಕೈಗಾರಿಕೆ, ಕೃಷಿ, ವ್ಯಾಪಾರ




ವಹಿವಾಟು ಹೀಗೆ ಹತ್ತು ಹಲವಾರು ಕ್ಷೇತ್ರಗಳಲ್ಲಿ ಕಾನೂನಿನಡಿ ಸಮಾನತೆ ಸಿಕ್ಕಿದೆ ಎಂದರೆ ಅದಕ್ಕೆ ಸಂವಿಧಾನ ಕಾರಣ. ಕಾಂಗ್ರೆಸ್ ಪಕ್ಷ ಸಂವಿಧಾನವನ್ನು ಅನುಷ್ಠಾನಗೊಳಿಸಿಕೊಂಡು ಬರುತ್ತಿದೆ ಎಂದು ತಿಳಿಸಿದರು.

ಸಂವಿಧಾನದಡಿ ಪ್ರತಿಯೊಬ್ಬರು ಸ್ವತಂತ್ರವಾಗಿ ಬದುಕುವ ಹಕ್ಕಿದೆ. ಯಾರ ಹಕ್ಕನ್ನು ಯಾರು ಕಸಿದುಕೊಳ್ಳುವಂತಿಲ್ಲ. ರಾಜ್ಯ ಬಿಜೆಪಿ. ಸರ್ಕಾರ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡು ಹೆಣ್ಣು ಮಕ್ಕಳು ಹಿಜಾಬ್ ಧರಿಸುವುದನ್ನು ನಿಷೇಧಿಸಲು ಹೊರಟಿತಲ್ಲದೆ ಹಿಜಾಬ್, ಜಟ್ಕ ಕಟ್, ಹಲಾಲ್ ಕಟ್ ಹೀಗೆ ಅನೇಕ ಕ್ಯಾತೆಗಳನ್ನು ತಗೆದಿದ್ದರಿಂದ ಜನ ವಿಧಾನಸಭೆ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿದ ಪರಿಣಾಮ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಅದೆ ರೀತಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾರ್ಯಕರ್ತರು ಪ್ರತಿ ಮನೆ ಮನೆಗೆ ಹೋಗಿ ಸಂವಿಧಾನ ಹಾಗೂ ಕಾಂಗ್ರೆಸ್ ಕಾರ್ಯಕ್ರಮಗಳನ್ನು ಜನರಿಗೆ ತಿಳಿಸಿ ಕಳೆದ ಬಾರಿಗಿಂತ ಈ ಸಾರಿ ಪ್ರತಿ ಬೂತ್‌ನಲ್ಲಿ ಹೆಚ್ಚಿಗೆ ನೂರು ಮತಗಳು ಸಿಗುವಂತೆ ನೋಡಿಕೊಳ್ಳಬೇಕೆಂದು ಕರೆ ನೀಡಿದರು.ದೇಶದಲ್ಲಿ ಸಂವಿಧಾನ ಉಳಿದು ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಶೋಷಿತರು ನೆಮ್ಮದಿಯಿಂದ ಬದುಕಬೇಕಾದರೆ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವುದು ಎಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ಕಾರ್ಯಕರ್ತರು ತಮ್ಮ ತಮ್ಮ ವಾರ್ಡ್, ಬೂತ್, ಮನೆ ಸುತ್ತಮುತ್ತ ಕಾಂಗ್ರೆಸ್ ಗ್ಯಾರೆಂಟಿಗಳನ್ನು ತಿಳಿಸಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಇನ್ನು ಗ್ಯಾರೆಂಟಿಗಳನ್ನು ನೀಡಲಿದೆ ಎನ್ನುವುದನ್ನು ಮನವರಿಕೆ ಮಾಡಿ ಪಕ್ಷವನ್ನು ಗೆಲ್ಲಿಸುವ ಕೆಲಸ ಮಾಡಬೇಕೆಂದು ಕಿವಿಮಾತು ಹೇಳಿದರು.ಜಿಲ್ಲಾ ಕಾಂಗ್ರೆಸ್ ಕಾಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್ ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷರುಗಳಾದ ನಜ್ಮತಾಜ್, ಎನ್.ಬಿ.ಟಿ.ಜಮೀರ್, ಹೆಚ್.ಶಬ್ಬೀರ್‌ಭಾಷ, ಶಬ್ಬೀರ್ ಅಹಮದ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ಗ್ಯಾರೆಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಸೈಯದ್ ಅಲ್ಲಾಭಕ್ಷಿ, ಭಾಗ್ಯಮ್ಮ, ಫೈಲ್ವಾನ್ ತಿಪ್ಪೇಸ್ವಾಮಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯಾರ್ಥಿಗಳ ಮನೋವಿಕಾಸಕ್ಕೆ ಪುಸ್ತಕಗಳ ಕೊಡುಗೆ




» **ಚಳ್ಳಕೆರೆ**

ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯನ್ನು ದಾಖಲಿಸುವ ದೃಷ್ಟಿಯಿಂದ ವಿದ್ಯಾರ್ಥಿಗಳಿಗೆ ಉಚಿತವಾಗಿ ಪುಸ್ತಕಗಳನ್ನು ನೀಡಿ ಅವರ ಜ್ಞಾನವಿಕಾಸಕ್ಕೆ ಅಡಿಪಾಯ ಹಾಕುತ್ತಿರುವ ಬೆಂಗಳೂರಿನ ಕೋಣನಕುಂಟೆ ಅಭ್ಯುದಯ ಸ್ವಯಂಸೇವಾ ಸಂಸ್ಥೆ ಕಾರ್ಯ ಶ್ಲಾಘನೀಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅಭ್ಯುದಯ ಸ್ವಯಂಸೇವಾ ಸಂಸ್ಥೆ ತಾಲ್ಲೂಕಿನ 18 ಸರ್ಕಾರಿ ಶಾಲೆಗಳಿಗೆ ತಮ್ಮ ಸಂಸ್ಥೆ ವತಿಯಿಂದ ವಿದ್ಯಾರ್ಥಿಗಳ ಜ್ಞಾನ ವಿಕಾಸಕ್ಕೆ ಅವಶ್ಯವಿರುವ ಸ್ಪರ್ಧಾತ್ಮಕ, ಕವನ, ಕಾದಂಬರಿ, ಕವಿಗಳ ಪರಿಚಯ, ನಾಡಿಗೆ ಹಿರಿಮೆ ದಾಖಲಿಸಿದ ಮಹಾನ್ ಚೇತನರ ಪುಸ್ತಕ ಮುಂತಾದವುಗಳನ್ನು ಉಚಿತವಾಗಿ ನೀಡಿದ್ದು, ಅವುಗಳನ್ನು ಶಿಕ್ಷಣ ಇಲಾಖೆ ಪರವಾಗಿ ಸ್ವೀಕರಿಸಿ ಅಭಿನಂದಿಸಿ ಮಾತನಾಡಿದರು.

ಶೈಕ್ಷಣಿಕ ಕ್ಷೇತ್ರದಲ್ಲೂ ಸಹ ಚಳ್ಳಕೆರೆ ತಾಲ್ಲೂಕು ಉತ್ತಮ ಸಾಧನೆಯನ್ನು ಈಗಾಗಲೇ ದಾಖಲಿಸಿದ್ದು, ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಂತೆ ಹಲವಾರು ವಿಚಾರಗಳಲ್ಲಿ ಶಿಕ್ಷಕರ ಸಮೂಹ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಶ್ರಮವಹಿಸುತ್ತಿದೆ ಎಂದರು. ಅಭ್ಯುದಯ ಸ್ವಯಂಸೇವಾ ಸಂಸ್ಥೆಯ ರೂವಾರಿ ಪ್ರತಾಪ್‌ಪರಾಶರ್ ಮಾತನಾಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಭೇಟಿ ಮಾಡಿ ಉಚಿತವಾಗಿ ಪುಸ್ತಕ ನೀಡುವ ಬಗ್ಗೆ ಮಾತನಾಡಿದಾಗ ಅಭ್ಯುದಯ ಸ್ವಯಂಸೇವಾ ಸಂಸ್ಥೆ ಕಾರ್ಯದ ಬಗ್ಗೆ ಹರ್ಷ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ತಾಲೂಕಿನ 18ಶಾಲೆಗಳಿಗೆ ಸುಮಾರು 1800 ಪುಸ್ತಕಗಳನ್ನು ಉಚಿತವಾಗಿ ನೀಡಲಾಗಿದೆ. ಹಲವಾರು ವಿಷಯಗಳು ಪುಸ್ತಕದಲ್ಲಿ ಅಡಕವಾಗಿದೆ. ವಿದ್ಯಾರ್ಥಿಗಳು ಅಧ್ಯಯನ ಶೀಲರಾದಾಗ ಮಾತ್ರ ನಮ್ಮ ಕೆಲಸ ಸಾರ್ಥವೆನ್ನಿಸುತ್ತದೆ ಎಂದರು.

### ಗೋವಿಂದ ಕಾರಜೋಳರವರಿಗೆ ಟಾಂಗ್ ಕೊಟ್ಟ ಚಂದ್ರಪ್ಪ



» **ನಾಯಕನಹಟ್ಟಿ**

ಬಿ.ಜೆ.ಪಿ.ಯವರು ಓಟು ಕೇಳುವುದಕ್ಕೆ ಬಂದಾಗ ನಮಗೋಸ್ಕರ ನೀವು ಏನಾದರೂ ಮಾಡಿದ್ದೀರಾ? ಎಂದು ಮಹಿಳೆಯರು ಪ್ರಶ್ನಿಸಬೇಕು ಎಂದು ಮಾಜಿ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಶ್ರೀ ಹೆಚ್.ಆಂಜನೇಯ ಹೇಳಿದರು.ಪಟ್ಟಣದ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ನಾಗರಕಟ್ಟೆಯಲ್ಲಿ ಶಾಸಕ ಎನ್.ವೈ. ಗೋಪಾಲಕೃಷ್ಣರವರ ನೇತೃತ್ವದಲ್ಲಿ ಏರ್ಪಡಿಸಿದ್ದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆ ತಳಕು ಮತ್ತು ನಾಯಕನಹಟ್ಟಿ ಹೋಬಳಿಗಳ ಮಟ್ಟದ ಕಾಂಗ್ರೆಸ್ ಪಕ್ಷದ ಪ್ರಚಾರ ಸಭೆಯಲ್ಲಿ ಉದ್ಘಾಟಿಸಿ ಮಾತನಾಡಿದ ಅವರು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಬೇಕೆಂದು ಮನವಿ ಮಾಡಿಕೊಂಡರು.

ಚಿತ್ರದುರ್ಗದ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ ಜಿಲ್ಲೆಯ ಬಿ.ಜೆ.ಪಿ. ಪಕ್ಷದ ಅಭ್ಯರ್ಥಿ ಗೋವಿಂದ ಕಾರಜೋಳರವರು ನಿನ್ನೆಯ ಒಂದು ಸಮಾರಂಭದಲ್ಲಿ ಮಾತನಾಡುತ್ತಾ ನಾನು ಗೆದ್ದರೆ ಸದಾ ಮೋದಿ ಜೊತೆಗೆ ಇರುತ್ತೇನೆ ಅದೇ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಚಂದ್ರಪ್ಪ ಗೆದ್ದರೆ ಡಸ್ಟ್‌ಬಿನ್(ಕಸದ ಪುಟ್ಟಿ)ಯಲ್ಲಿ ಇರುತ್ತಾರೆ ಎಂದು ಸೊಕ್ಕಿನ ಮಾತನ್ನು ಆಡಿದ್ದಾರೆ. ಇದನ್ನು ನಾನು ತೀವ್ರವಾಗಿ ಖಂಡಿಸುತ್ತಾ ಅವರಿಗೆ ನಾನು ಒಂದು ಮಾತನ್ನು ಹೇಳಲು ಇಚ್ಛೆಪಡುತ್ತೇನೆ ನಾನು ಈ ಜಿಲ್ಲೆಯಲ್ಲಿ 5 ವರ್ಷ ಸಂಸದನಾಗಿ ಜನರ ಒಡನಾಡಿಯಾಗಿ ಸರ್ಕಾರಿ ಹಾಗೂ ವೈಯಕ್ತಿಕವಾಗಿ ಹಲವಾರು ಪ್ರಗತಿಪರ ಕೆಲಸಗಳನ್ನು ಮಾಡಿದ್ದೇನೆ ಅಲ್ಲದೇ ಜಿಲ್ಲೆಯ ಜನರ ಕಷ್ಟ-ಸುಖಗಳಲ್ಲಿ ಭಾಗಿಯಾಗಿದ್ದೇನೆ. ನಾನು ಜಿಲ್ಲೆಯ ಯಾವುದೇ ಹಳ್ಳಿಗೆ ಹೋದರು ನಮ್ಮ ಕಾರ್ಯಕರ್ತರ ಹೆಸರನ್ನು ನಾನು ಹೇಳುತ್ತೇನೆ. ಆದರೆ ನೀವು ಈ ಜಿಲ್ಲೆಗೆ ಬಂದು 1 ವಾರ ಆಗಿದೆ ಇನ್ನೂ ಈ ಜಿಲ್ಲೆಯ ನಿಮ್ಮ ಪಕ್ಷದ ಮುಖಂಡರನ್ನೇ ನೀವು ಗುರುತಿಸಲು ಆಗುತ್ತಿಲ್ಲ ಅಂತದರಲ್ಲಿ ನನ್ನನ್ನು ಕಸದ ಪುಟ್ಟಿಗೆ ಹೋಲಿಕೆ ಮಾಡಿ ಮಾತನಾಡುವುದು ಸರಿ ಇಲ್ಲ ನೀವು ನಿಮ್ಮ ಪಕ್ಷದ ಪರ ಮತ ಕೇಳಿ ಆದರೆ ಅಹಂಕಾರದ ಮಾತು ಸಮಂಜಸವಲ್ಲ ಇದು ಗರ್ವ ಅಹಂಕಾರ ಸೊಕ್ಕಿಗೆ ಹಿಡಿದ ಕೈಗನ್ನಡಿಯಾಗಿದೆ. ಈ ಬಾರಿ ಕಾರಜೋಳ ಸೋಲು ನಿಶ್ಚಿತ ಎಂದರು.

---

#### ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಸಲಹೆ

# ದೇಹ ತಂಪಾಗಿರಲು ದ್ರವ ಆಹಾರ ಸೇವಿಸಿ

» **ಚಿತ್ರದುರ್ಗ**

ತಾಪಮಾನ ಹೆಚ್ಚುತ್ತಿರುವುದರಿಂದ ನಮ್ಮ ದೇಹ ತಂಪಾಗಿರಲು ಸರಾಗವಾಗಿ ಜೀರ್ಣವಾಗುವಂತಹ ದ್ರವ ಆಹಾರ ಸೇವಿಸುವುದು ಬಹು ಮುಖ್ಯ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ದೊಡ್ಡ ಸಿದ್ದವ್ವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಜೆ.ಎನ್.ಕೋಟೆ ಉಪ ಕೇಂದ್ರದ ಹೊರವಲಯದಲ್ಲಿ ಇರುವ ಶ್ರೀ ಕೃಷ್ಣ ಪೌಲ್ಟ್ರಿ ಫಾರಂನಲ್ಲಿ ಹೊರ ರಾಜ್ಯ ಬಿಹಾರ, ಮಧ್ಯಪ್ರದೇಶದಿಂದ ಬಂದು ಫಾರಂನಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಆರೋಗ್ಯ ರಕ್ಷಣೆ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗಲೀಜುನಲ್ಲಿ ಕೆಲಸ ಮಾಡುವ ತಾವು ನಿತ್ಯ ಸ್ನಾನ ಮಾಡುವುದು, ಊಟಕ್ಕೂ ಮುನ್ನ ಕೈಗಳ ಸ್ವಚ್ಚತೆ ಕಾಪಾಡಿಕೊಳ್ಳುವುದು, ತೆಳುವಾದ ಶುಭ್ರ ಕಾಟನ್ ಬಟ್ಟೆಗಳನ್ನು ಧರಿಸಿಕೊಂಡು, ಆಗಿಂದಾಗ್ಗೆ ನೀರು



ಸೇವನೆ ಮಾಡುತ್ತಾ, ರಾಗಿ ಗಂಜಿ, ಮಜ್ಜಿಗೆ, ಬೇಳೆ ನೀರು ಜೀರ್ಣವಾಗುವಂತಹ ಆಹಾರ ಸೇವಿಸುತ್ತಾ ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಸಂಶಯಾಸ್ಪದ ಇಬ್ಬರು ಕುಷ್ಟರೋಗ ಪ್ರಕರಣಗಳು ಕಂಡುಬಂದ ಪ್ರಯುಕ್ತ ಪೌಲ್ಟ್ರಿ ಫಾರಂನಲ್ಲಿ ಕೆಲಸ ಮಾಡುವ 25ಕ್ಕೂ ಹೆಚ್ಚು ಸಂಪರ್ಕಿಗಳ ಸಮೀಕ್ಷೆ ಮಾಡಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ, ಮಾತನಾಡಿ, ಪರಿಸರ ಸ್ವಚ್ಚತೆ, ವೈಯಕ್ತಿಕ ಸ್ವಚ್ಚತೆಗೆ ಹೆಚ್ಚು ಆದ್ಯತೆ ನೀಡಿ, ಯಾವುದೇ ರೋಗಕ್ಕೆ ಭಯ ಬೇಡ ಎಚ್ಚರಿಕೆ ಇರಲಿ, ರೋಗ ಭಾರದಂತೆ ಮುನ್ನೆಚ್ಚರಿಕೆ ಕ್ರಮ ಅನುಸರಿಸಿ. ಆರೋಗ್ಯ ಸಮಸ್ಯೆ ಕಂಡು ಬಂದರೆ ಸಮೀಪದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ತಮ್ಮ ಆರೋಗ್ಯ ಕಾಪಾಡಿಕೊಳ್ಳಿರಿ ಎಂದರು.ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಎಚ್. ಆಂಜನೇಯಮಾತನಾಡಿ,"ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ' "ಆರೋಗ್ಯವೇ ಭಾಗ್ಯ" ಕೆಲಸ ಕಾರ್ಯಗಳ ಕಡೆ ಎಷ್ಟು ಗಮನ ಹರಿಸುತ್ತೇವೆಯೋ ಆರೋಗ್ಯದ ಕಡೆ ಕೂಡ ಅಷ್ಟು ಗಮನ ಹರಿಸಬೇಕು. ತಾಪಮಾನ ಹೆಚ್ಚು ಇರುವುದರಿಂದ ಸೇವಿಸಿದ ಆಹಾರ ಸರಿಯಾಗಿ ಜೀರ್ಣವಾಗದೆ ವಾಂತಿ ಭೇದಿ ಸಂಭವಿಸುವ ಸಾಧ್ಯತೆ ಇದೆ. ಪ್ರಯುಕ್ತ ಶುದ್ಧ ಕುಡಿಯುವ ನೀರಿನ ಬಳಕೆ, ನಾರಿನಾಂಶ ಇರುವ ಹಸಿರು ತರಕಾರಿಗಳು, ಹಣ್ಣುಗಳು, ನಿಂಬೆ ಪಾನಕ, ಸೇವನೆ ಮಾಡಬೇಕು ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಧರ್ ಮಾತನಾಡಿ, ಫಾರಂನಲ್ಲಿ ಕೆಲಸ ಮಾಡುವ ತಾವುಗಳು ಅವಶ್ಯ ಸಂದರ್ಭದಲ್ಲಿ ತಪ್ಪದೇ ಮಾಸ್ಕ್ ಧರಿಸುವುದು, ಆದಷ್ಟು ಬೆಳಗಿನ ಸಮಯದಲ್ಲಿ ಕೆಲಸ ನಿರ್ವಹಿಸಿ ಮಧ್ಯಾಹ್ನ ವಿರಾಮ ಪಡೆಯುವುದು ಒಳಿತು ಎಂದರು. ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ರತ್ನಮ್ಮ ಬೀರಜ್ಜರ್, ಸಮುದಾಯ ಆರೋಗ್ಯ ಅಧಿಕಾರಿ ರಮೇಶ್, ಫೌಲ್ಟ್ರಿ ಫಾರಂನ ವ್ಯವಸ್ಥಾಪಕ ಪ್ರಸಾದ್ ಹಾಜರಿದ್ದರು.


---

# ಕಾರಜೋಳರವರಿಂದ ನಗರದಲ್ಲಿ ಮತಯಾಚನೆ

» **ಚಿತ್ರದುರ್ಗ**

ದೇಶದ ಅಭಿವೃದ್ಧಿ, ರಕ್ಷಣೆ, ವಿಶ್ವದ ಬೇರೆ ಬೇರೆ ದೇಶಗಳ ಜೊತೆ ಸ್ನೇಹ ಸಂಬಂಧ, ವ್ಯಾಪಾರ ವಹಿವಾಟಿಗೆ ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಬೇಕಾಗಿರುವುದರಿಂದ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ.ಗೆ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸುವಂತೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಮತದಾರರಲ್ಲಿ ಮನವಿ ಮಾಡಿದರು.

ಚಳ್ಳಕೆರೆ ಟೋಲ್‌ಗೇಟ್ ಸಮೀಪವಿರುವ ಈಡಿಗರ ಹಾಸ್ಟೆಲ್ ಹಿಂಭಾಗದಲ್ಲಿ ಮನೆ ಮನೆಗೆ ತೆರಳಿ ಮತಯಾಚಿಸಿ ನಂತರ ಮಾತನಾಡಿದ ಗೋವಿಂದ ಕಾರಜೋಳರವರು ಬರುವ 19 ರಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿರವರು ಪ್ರಚಾರಕ್ಕಾಗಿ ಬರುತ್ತಿದ್ದಾರೆ. ಅನೇಕ ನಾಯಕರುಗಳು ಈಗಾಗಲೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ನನ್ನ ಪರ ಮತಯಾಚನೆ ಆರಂಭಿಸಿದ್ದಾರೆ. ಕಾಂಗ್ರೆಸ್‌ನಲ್ಲಿ ದೇಶದ ಪ್ರಧಾನಿಯಾಗುವ ಅರ್ಹತೆ ಯಾರಿಗೂ ಇಲ್ಲದಂತಾಗಿದೆ. ಜಗತ್ತಿನ ಶ್ರೀಮಂತರ ಪಟ್ಟಿಯಲ್ಲಿ ಭಾರತ ಐದನೆ ಸ್ಥಾನದಲ್ಲಿದ್ದು, ಇನ್ನು ಮೂರು ವರ್ಷಗಳಲ್ಲಿ ಭಾರತ ಮೂರನೆ ಸ್ಥಾನಕ್ಕೆ ಬರಲಿದೆ ಎಂದು ಹೇಳಿದರು.ಇದೆ ತಿಂಗಳ 26 ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದಿಂದ ಜನ ನನ್ನನ್ನು ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಟ್ಟರೆ ಪ್ರಧಾನಿ ಮೋದಿ ಜೊತೆ ಕುಳಿತುಕೊಳ್ಳುತ್ತೇನೆನ್ನುವುದು ಕ್ಷೇತ್ರದ ಹತ್ತೊಂಬತ್ತು ಲಕ್ಷ ಜನರಿಗೆ ಮನವರಿಕೆಯಾಗಿದೆ. ಬಿಟ್ಟಿ ಭಾಗ್ಯಗಳ ಆಸೆ ತೋರಿಸಿ ವಿಧಾನಸಭೆ ಚುನಾವಣೆಯಲ್ಲಿ ಮೋಸದಿಂದ ಕಾಂಗ್ರೆಸ್ ಗೆದ್ದಿದೆ. ಚಿತ್ರದುರ್ಗ ವಿಧಾನಸಭೆ ಚುನಾವಣೆಯಲ್ಲಿ



ಜಿ.ಹೆಚ್.ತಿಪ್ಪಾರೆಡ್ಡಿ ಅಭಿವೃದ್ಧಿ ಕೆಲಸ ಮಾಡಿಲ್ಲ ಎಂದು ಸೋತಿಲ್ಲ. ಕಾಂಗ್ರೆಸ್‌ನ ಕುತಂತ್ರದಿಂದ ಸೋತಿದ್ದಾರೆ. ಹಾಗಾಗಿ ಈ ಚುನಾವಣೆಯಲ್ಲಿ ಆಸೆ ಆಮಿಷಗಳಿಗೆ ಬಲಿಯಾಗದೆ ಬಿಜೆಪಿ.ಗೆ ಮತ ಚಲಾಯಿಸಿ ನನ್ನನ್ನು ಬಹುಮತಗಳಿಂದ ಗೆಲ್ಲಿಸಿ ಎಂದು ಗೋವಿಂದ ಕಾರಜೋಳ ಜನತೆಯಲ್ಲಿ ವಿನಂತಿಸಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ರಾಜ್ಯ ಬಿಜೆಪಿ. ಸರ್ಕಾರದಲ್ಲಿ ಗೋವಿಂದ ಕಾರಜೋಳರವರು ಮಂತ್ರಿಯಾಗಿ ವಿವಿಧ ಖಾತೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ. ಲೋಕೋಪಯೋಗಿ, ಸಮಾಜ ಕಲ್ಯಾಣ, ನೀರಾವರಿ ಹೀಗೆ ಹತ್ತು ಹಲವಾರು ಖಾತೆಗಳಲ್ಲಿದ್ದಾಗ ರಾಜ್ಯದಲ್ಲಿ ಸಾಕಷ್ಟು ಅಭಿವೃದ್ಧಿ ಕೈಗೊಂಡಿದ್ದಾರೆ. ಅಪ್ಪರ್ ಭದ್ರಾ ಯೋಜನೆಗೆ ಕೇಂದ್ರ ಸರ್ಕಾರ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಮಂಜೂರು ಮಾಡುವಲ್ಲಿ ಇವರ ಪಾತ್ರ ಸಾಕಷ್ಟಿದೆ. ರೈತರಿಗೆ ಅನೇಕ ಚೆಕ್‌ಡ್ಯಾಂಗಳನ್ನು ಕಟ್ಟಿಸಿದ್ದಾರೆ. ಹಿರಿಯೂರಿನ ವಾಣಿವಿಲಾಸ ಸಾಗರದಿಂದ ನೀರು ತರುವುದಕ್ಕಾಗಿ 593 ಕೋಟಿ ರೂ.ಗಳನ್ನು ನೀಡಿ ಓವರ್‌ಹೆಡ್ ಟ್ಯಾಂಕ್ ಕಟ್ಟಿಸಿದ್ದಾರೆ. ಜಗತ್ತಿನಲ್ಲಿ ಮೋದಿ ನಂ. ಒನ್ ಪ್ರಧಾನಿ ಎನಿಸಿಕೊಂಡಿದ್ದಾರೆ. ಉಕ್ರೇನ್-ರಷ್ಯ ನಡುವೆ ಯುದ್ದ ನಡೆದಾಗ ನಮ್ಮ ದೇಶದ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಕರೆ ತಂದ ಕೀರ್ತಿ ನರೇಂದ್ರಮೋದಿಗೆ ಸಲ್ಲುತ್ತದೆ. ಹಾಗಾಗಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಬಿಜೆಪಿ. ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಗೋವಿಂದ ಕಾರಜೋಳರವರನ್ನು ಅತ್ಯಧಿಕ ಮತಗಳ ಅಂತರದಿಂದ ಗೆಲ್ಲಿಸುವಂತೆ ಜನತೆಯಲ್ಲಿ ಮನವಿ ಮಾಡಿದರು.ಶಕ್ತಿ ಕೇಂದ್ರದ ಚುನಾವಣಾ ಉಸ್ತುವಾರಿ ಡಾ.ಸಿದ್ದಾರ್ಥ, ಬಿಜೆಪಿ. ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಮಹಿಳಾ ಮೋರ್ಚಾದ ಕವನ, ಪೂರ್ಣಿಮ, ದಿಶಾ, ಧನಂಜಯ, ಕೃಷ್ಣ ಸೇರಿದಂತೆ ಇತರೆ ಪದಾಧಿಕಾರಿಗಳು ಮತಯಾಚನೆಯಲ್ಲಿ ಪಾಲ್ಗೊಂಡಿದ್ದರು.

---

## ಅಂಬೇಡ್ಕರ್ ಮೌಲ್ಯ ಸಂರಕ್ಷಣೆಗೆ ನಾವೆಲ್ಲರೂ ಮುಂದಾಗೋಣ



» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ಆಚರಿಸುವ ಮೂಲಕ ಅವರು ನಾಡಿಗೆ ನೀಡಿದ ಕೊಡುಗೆಯನ್ನು ಸ್ಮರಿಸಬಹುದಾಗಿದೆ. ವಿಶೇಷವಾಗಿ ವಿಶ್ವವೇ ಮೆಚ್ಚುವಂತಹ ಸಂವಿಧಾನವನ್ನು ನೀಡಿದ ಮಹಾನ್ ಮೇಧಾವಿ ಡಾ.ಬಿ.ಆರ್. ಅಂಬೇಡ್ಕರ್‌ರವರು ನಾವೆಲ್ಲರೂ ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳೋಣವೆಂದು ವಲಸೆ ಗ್ರಾಮದ ಬಿ.ಆರ್.ಅಂಬೇಡ್ಕರ್ ಯುವಕ ಸಂಘದ ಅಧ್ಯಕ್ಷ ಪ್ರದೀಪ್‌ಕುಮಾರ್ ತಿಳಿಸಿದರು. ಅವರು, ಗ್ರಾಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ನಮಿಸುವ ಮೂಲಕ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರಳವಾಗಿ ಜಯಂತಿ ಆಚರಿಸಲಾಗುತ್ತಿದೆ. ಯುವ ಜನಾಂಗ ಅಂಬೇಡ್ಕರ್ ಹೋರಾಟಗಳ ಬಗ್ಗೆ ಮಾಹಿತಿ ಪಡೆದು ಅದರಂತೆ ನಡೆಯುವ ಸಂಕಲ್ಪ ಮಾಡೋಣವೆಂದರು. ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಪಿ.ತಿಪ್ಪೇರುದ್ರಪ್ಪ, ಉಪಾಧ್ಯಕ್ಷ ಮಹೇಶ್, ಪ್ರಧಾನ ಕಾರ್ಯದರ್ಶಿ ವಿ.ಪ್ರದೀಪ್, ಖಜಾಂಚಿ ಮಂಜುನಾಥ, ಸಹಕಾರ್ಯದರ್ಶಿ ಮಲ್ಲೇಶ್, ಸಂಘಟನಾ ಸಂಚಾಲಕ ಟಿ.ಚಂದ್ರಣ್ಣ ಮುಂತಾದವರು ಪಾಲ್ಗೊಂಡಿದ್ದರು.

---

**ಪ್ರಮುಖ ಸುದ್ದಿ**

#### ಕಾಂಗ್ರೆಸ್ ಅಲ್ಪಸಂಖ್ಯಾತ ಮುಖಂಡರ ಹಾಗೂ ಕಾರ್ಯಕರ್ತರ ಸಭೆ ಉದ್ಘಾಟಿಸಿದ ಜಮೀರ್ ಅಹಮದ್ ಖಾನ್ ಹೇಳಿಕೆ

# ಮುಸ್ಲಿಂರ ಒಂದೊಂದು ಮತಕ್ಕೂ ಪ್ರಾಮುಖ್ಯತೆ

» **ಚಿತ್ರದುರ್ಗ**

ಅಲ್ಪಸಂಖ್ಯಾತರು, ದಲಿತರನ್ನು ಗುರಿಯಾಗಿಸಿಕೊಂಡು ಕಳೆದ ಹತ್ತು ವರ್ಷಗಳಿಂದ ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಬಿಜೆಪಿ.ಯನ್ನು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸೋಲಿಸಬೇಕಾಗಿರುವುದರಿಂದ ಅಲ್ಪಸಂಖ್ಯಾತರ ಮತದಾನದ ಪರ್ಸೆಂಟೇಜ್ ಹೆಚ್ಚಾಗಬೇಕೆಂದು ವಸತಿ ಅಲ್ಪಸಂಖ್ಯಾತರ ಇಲಾಖೆ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್ ಮನವಿ ಮಾಡಿದರು.

ಇದೆ ತಿಂಗಳ 26 ರಂದು ನಡೆಯಲಿರುವ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಉಮಾಪತಿ ಕಲ್ಯಾಣ ಮಂಟಪದಲ್ಲಿ ಸೋಮವಾರ ನಡೆದ ಕಾಂಗ್ರೆಸ್ ಅಲ್ಪಸಂಖ್ಯಾತ ಮುಖಂಡರ ಹಾಗೂ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದ ಬಿ.ಝಡ್. ಜಮೀರ್ ಅಹಮದ್ ಖಾನ್ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರು ಈ ಚುನಾವಣೆಯಲ್ಲಿ ಅತ್ಯಧಿಕ ಬಹುಮತಗಳಿಂದ ಗೆಲ್ಲಬೇಕಾಗಿರುವುದರಿಂದ ಮುಸ್ಲಿಂರ ಒಂದೊಂದು ಮತಕ್ಕೂ ಪ್ರಾಮುಖ್ಯತೆಯಿದೆ ಎಂದು ಹೇಳಿದರು.

ಚುನಾವಣೆಯಲ್ಲಿ ಓಟು ಹಾಕಿದರೆ ನನಗೇನು ಲಾಭ ಎಂದು ಭಾವಿಸಿ ಮನೆಯಲ್ಲಿ ಸುಮ್ಮನೆ ಕೂರಬೇಡಿ. ರಾಜ್ಯದಲ್ಲಿ ಬಿಜೆಪಿ. ಸರ್ಕಾರ ಅಧಿಕಾರದಲ್ಲಿದ್ದಾಗ



ಮುಸಲ್ಮಾನರಿಗೆ ಏನೆಲ್ಲಾ ತೊಂದರೆ ಕೊಟ್ಟಿದೆ ಎನ್ನುವುದು ಗೊತ್ತಿದೆ. ಹಿಜಾಬ್, ಜಟ್ಕ್ ಕಟ್, ಹಲಾಲ್ ಕಟ್ ಹೀಗೆ ಒಂದಲ್ಲ ಒಂದು ರೀತಿಯ ಕ್ಯಾತೆ ತೆಗೆದು ಹಿಂದು-ಮುಸಲ್ಮಾನರ ನಡುವಿನ ಭಾವೈಕ್ಯತೆಯನ್ನು ಹಾಳು ಮಾಡುವ ಕುತಂತ್ರ ನಡೆಸಿತು. 1994 ರಲ್ಲಿ ವೀರಪ್ಪಮೊಯ್ಲಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಮುಸಲ್ಮಾನರಿಗೆ ನೀಡಿದ್ದ ಶೇ. ನಾಲ್ಕರಷ್ಟು ಮೀಸಲಾತಿಯನ್ನು ಬಿಜೆಪಿ. ಸರ್ಕಾರ ರದ್ದುಪಡಿಸಿದೆ. ಅಲ್ಪಸಂಖ್ಯಾತ ಮಕ್ಕಳ ಸ್ಕಾಲರ್‌ಶಿಪ್ ಕಸಿದುಕೊಂಡಿದೆ. ತ್ಯಾಗ ಬಲಿದಾನಗಳ ಇತಿಹಾಸವಿರುವ ಕಾಂಗ್ರೆಸ್ ಪಕ್ಷ ಸಾಧನೆಯನ್ನು ಹೇಳಿ ಜನರ ಬಳಿ ಮತ ಕೇಳುತ್ತಿದ್ದರೆ ಕೋಮುವಾದಿ ಬಿಜೆಪಿ. ಜಾತಿ ಧರ್ಮಗಳ ನಡುವೆ ಸಂಘರ್ಷವಿಟ್ಟು ಮತ ಕೇಳುತ್ತಿದೆ. ಇವೆರಡಲ್ಲಿ ಯಾವುದು ಬೇಕು ನೀವೇ ಆಯ್ಕೆ ಮಾಡಿಕೊಳ್ಳಿ ಎಂದು ಅಲ್ಪಸಂಖ್ಯಾತರಲ್ಲಿ ವಿನಂತಿಸಿದರು.

ವಿಧಾನಸಭೆ ಚುನಾವಣೆ ಪೂರ್ವದಲ್ಲಿಯೇ ಕಾಂಗ್ರೆಸ್ ಸರ್ಕಾರ ರಾಜ್ಯದ ಜನರಿಗೆ ನೀಡಿದ ಭರವಸೆಯಂತೆ ಐದು ಗ್ಯಾರೆಂಟಿಗಳನ್ನು ಈಡೇರಿಸಿದೆ. ಕೇಂದ್ರದಲ್ಲಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಗ್ಯಾರೆಂಟಿಗಳ ಇನ್ನು ಹೆಚ್ಚಿನ ಲಾಭ ದೇಶದ ಜನರಿಗೆ ಸಿಗುತ್ತದೆ. ಎಲ್ಲಾ ಜಾತಿ ಧರ್ಮದವರನ್ನು ಜೊತೆಯಲ್ಲಿ ತೆಗೆದುಕೊಂಡು ಹೋಗುವ ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲೇಬೇಕಾಗಿರುವುದರಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರನ್ನು ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಕೋರಿದರು.

ಕಾಂಗ್ರೆಸ್ ಸರ್ಕಾರ ಈ ಹಿಂದೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದಾಗ ಒಂದು ಲಕ್ಷ 80 ಸಾವಿರದ 253 ಮನೆಗಳನ್ನು ಮಂಜೂರು ಮಾಡಿತ್ತು. ಬಿಜೆಪಿ. ಜೆಡಿಎಸ್. ಸರ್ಕಾರ ಅಧಿಕಾರಕ್ಕೆ ಬಂದಾಗ ಒಂದೂ ಮನೆ ಕೊಟ್ಟಿಲ್ಲ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗಮನಕ್ಕೆ ತಂದಾಗ ಬಡವರು ಮನೆಗಳನ್ನು ನಿರ್ಮಿಸಿಕೊಳ್ಳಲು 7400 ಕೋಟಿ ರೂ.ಗಳನ್ನು ಮಂಜೂರು ಮಾಡಿ ಐದು ನೂರು ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದಾರೆ. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಬಡವರಿಗೆ ಒಂದು ಮನೆಯೂ ಸಿಕ್ಕಿಲ್ಲ. ಎಂ.ಎಲ್.ಎ. ಎಂ.ಪಿ. ಚುನಾವಣೆ ಅತಿ ಪ್ರಾಮುಖ್ಯವಾಗಿರುವುದರಿಂದ ಈ ಬಾರಿಯ ಲೋಕಸಭೆ ಚುನಾವಣೆಯನ್ನು ಅಲ್ಪಸಂಖ್ಯಾತರು ಗಂಭೀರವಾಗಿ ತೆಗೆದುಕೊಂಡು ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡಬೇಕು. ಹತ್ತು ವರ್ಷಗಳ ಕಾಲ ದೇಶವನ್ನು ಮುನ್ನಡೆಸಿದ ಪ್ರಧಾನಿ ಮೋದಿ ಪ್ರತಿ ಬಡವರ ಬ್ಯಾಂಕ್ ಖಾತೆಗಳಿಗೆ ಹದಿನೈದು ಲಕ್ಷ ರೂ.ಗಳನ್ನು ಜಮಾ ಮಾಡುವುದಾಗಿ ನಂಬಿಸಿ ಅಧಿಕಾರಕ್ಕೆ ಬಂದು ಕೊಟ್ಟ ಮಾತಿನಂತೆ ನಡೆದುಕೊಂಡಿಲ್ಲ. ನಮ್ಮ ಪಕ್ಷದ ಗ್ಯಾರೆಂಟಿಗಳನ್ನು ಈಗ ಕಾಪಿ ಮಾಡಲು ಹೊರಟಿದ್ದಾರೆಂದು ಛೇಡಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನರೇಂದ್ರಮೋದಿ ಸರ್ವಾಧಿಕಾರಿತನ ನಿಲ್ಲಬೇಕಾದರೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ.ಯನ್ನು ಸೋಲಿಸಿ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಬೇಕು. ಅದಕ್ಕಾಗಿ ಅಲ್ಪಸಂಖ್ಯಾತರ ಮತದಾನ ಹೆಚ್ಚಳವಾಗಬೇಕು. 28 ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನ ಗೆಲ್ಲಬೇಕಾಗಿದೆ. ಈ ನಿಟ್ಟಿನಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರನ್ನು ಬಹುಮತಗಳಿಂದ ಗೆಲ್ಲಿಸಿ ಎಂದು ಅಲ್ಪಸಂಖ್ಯಾತರಲ್ಲಿ ವಿನಂತಿಸಿದರು.ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಮಾತನಾಡುತ್ತ ದೇಶ ಗಂಡಾಂತರದಲ್ಲಿದೆ. ಅಲ್ಪಸಂಖ್ಯಾತರು ಮನೆಯಲ್ಲಿ ಕುಳಿತುಕೊಳ್ಳದೆ ಕಡ್ಡಾಯವಾಗಿ ಮತ ಚಲಾಯಿಸಿ. ಜಾತಿ ಧರ್ಮಗಳನ್ನು ಎತ್ತಿಕಟ್ಟುತ್ತಿರುವ ಬಿಜೆಪಿ. ಮತ್ತೆ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಸಂವಿಧಾನ ಉಳಿಯುವುದಿಲ್ಲ. ಅಲ್ಪಸಂಖ್ಯಾತರು ದಲಿತರು ಬದುಕುವುದು ಕಷ್ಟವಾಗುತ್ತದೆ. ಕಾಂಗ್ರೆಸ್ ಪಕ್ಷ ಗೆದ್ದರೆ ರಾಹುಲ್‌ಗಾಂಧಿ ಅಧಿಕಾರದ ಚುಕ್ಕಾಣಿ ಹಿಡಿಯುತ್ತಾರೆಂದು ಹೇಳಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T